ಸಂಪುಟ : 9 ಸಂಚಿಕೆ 27 ಪುಟ : 4 ಬೆಲೆ : 3.00 ರವಿವಾರ ಫೆಬ್ರವರಿ 25, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 27 Pages : 4 Price : 3.00 Sunday February 25, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ । ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಿದ ಸಿಎಂ ಸಿದ್ದರಾಮಯ್ಯ

# ನುಡಿದಂತೆ ನಡೆದ ಸರ್ಕಾರ ನಮ್ಮದು

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಹಾದಾಯಿ, ಕಳಸಾ ಬಂಡೂರಿ ನಾಲಾ ಯೋಜನೆ ಈ ಭಾಗದ ಜನರ ಬಹುದಿನಗಳ ಕನಸಾಗಿದೆ. ಕೇಂದ್ರದ ಪರಿಸರ ಮಂಡಳಿಯು ಅನುಮತಿ ನೀಡಿದರೆ ನಾಳೆಯಿಂದಲೇ ಕಳಸಾ ಬಂಡೂರಿ ನಾಲಾ ಯೋಜನೆ ಕಾಮಗಾರಿಯನ್ನು ಆರಂಭಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಶನಿವಾರ ನವಲಗುಂದದ ಮಾಡೆಲ್ ಹೈಸ್ಕೂಲ್ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಸಹಯೋಗದಲ್ಲಿ ನವಲಗುಂದ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಗೆ ಒಳಪಡುವ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ, ಗ್ಯಾರಂಟಿ ಯೋಜನೆಗಳ ಸಮಾವೇಶ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಹಕ್ಕುಪತ್ರಗಳ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ ಮಾಡಲಾಗಿದೆ. ಶಂಕುಸ್ಥಾಪನೆ ಕಲ್ಲುಗಳನ್ನು ನೋಡಿದರೆ ಗೊತ್ತಾಗಲಿದೆ ಅಭಿವೃದ್ಧಿ ಕಾರ್ಯಗಳು ರಾಜ್ಯದಲ್ಲಿ ನಡೆಯುತ್ತಿವೆ ಎಂಬುದು. ಅಲ್ಲದೇ ಇಂದು 1385 ಜನ ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲಾಗುತ್ತಿದೆ. ಎನ್.ಎಚ್. ಕೋನರೆಡ್ಡಿ ಅವರು ಹಿಂದಿನ ಅವಧಿಯಲ್ಲಿ ರೂ. 3 ಸಾವಿರ ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದರು. 2013ರಿಂದ 2018ರವರೆಗೆ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ರಾಜ್ಯದಲ್ಲಿ ಜಾರಿಗೆ ತರಲಾಗಿತ್ತು. 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಲಾಗಿತ್ತು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ವಾರಸುದಾರರು ಎಂದು ತಿಳಿಸಿದರು.



ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಮಾತನಾಡಿ, ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಸರ್ಕಾರ ಘೋಷಿಸಿದೆ. ಭಾರತದಲ್ಲಿ ವಿನೂತನ ಕಾರ್ಯಕ್ರಮಗಳನ್ನು ನಮ್ಮ ಸರ್ಕಾರ ಜಾರಿಗೆ ತಂದಿದೆ. ಚಕ್ಕಡಿ ರಸ್ತೆಗಳನ್ನು ಈ ಭಾಗದಲ್ಲಿ ನಿರ್ಮಾಣ ಮಾಡಲಾಗಿದೆ. ಅಚ್ಚುಕಟ್ಟಾದ ಬಡಾವಣೆ ನಿರ್ಮಿಸಲಾಗುತ್ತಿದೆ. ಈ ಭಾಗ ಇನ್ನಷ್ಟು ಅಭಿವೃದ್ಧಿಯಾಗಲಿ ಎಂದು ಹೇಳಿದರು.

ಶಾಸಕ ಎನ್.ಎಚ್. ಕೋನರಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ನವಲಗುಂದ ಕ್ಷೇತ್ರದಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆದಿವೆ. ಅಂದಾಜು ರೂ. 200 ಕೋಟಿ ವೆಚ್ಚದಲ್ಲಿ 62 ಕಾಮಗಾರಿಗಳಿಗೆ ಶಂಕುಸ್ಥಾಪನೆ, ಭೂಮಿ ಪೂಜೆ ಮಾಡಲಾಗಿದೆ. ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಬಿಡುಗಡೆಗೊಳಿಸಬೇಕು. ಮಹಾದಾಯಿ–ಕಳಸಾ ಬಂಡೂರಿ ಯೋಜನೆ ಈ ಭಾಗದ ಜನರ ಬಹು ದಿನಗಳ ಕನಸಾಗಿದೆ. ಟೆಂಡರ್ ಕರೆದು ಕಾಮಗಾರಿ ಆರಂಭಿಸಬೇಕಾಗಿದೆ. ನವಲಗುಂದ, ಅಣ್ಣಿಗೇರಿ ಹಾಗೂ ಹುಬ್ಬಳ್ಳಿ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನು ಮಾಡಲು ಪಣ ತೊಟ್ಟಿದ್ದೇನೆ ಎಂದರು.

> ಬಸವಾದಿ ಶರಣರು ನುಡಿದಂತೆ ನಡೆದವರು. ಅವರ ಹಾದಿಯಲ್ಲಿ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಚುನಾವಣೆ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಅಧಿಕಾರಕ್ಕೆ ಬಂದ 8 ತಿಂಗಳಲ್ಲೇ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಬಜೆಟ್‌ನಲ್ಲಿ ಕಳೆದ ಬಾರಿಗಿಂತ 43 ಸಾವಿರ ಕೋಟಿ ರೂ ಹಣವನ್ನು ಹೆಚ್ಚಳ ಮಾಡಲಾಗಿದೆ. ರಾಜ್ಯ ಸುಭದ್ರವಾದರೆ ಕೇಂದ್ರ ಸುಭದ್ರವಾಗಿರಲಿದೆ. ಕೇಂದ್ರವು ಹೆಚ್ಚಿನ ಅನುದಾನ ನೀಡಿದರೆ ಸೇತುವೆ, ರಸ್ತೆ, ನೀರಾವರಿ ಸೇರಿದಂತೆ ಹಲವಾರು ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.
>
> – **ಸಿದ್ದರಾಮಯ್ಯ**, ಮುಖ್ಯಮಂತ್ರಿಗಳು.

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು 50 ಹೊಸ ಬಸ್‌ಗಳಿಗೆ ಚಾಲನೆ ನೀಡಿದರು. ಸಾಂಕೇತಿಕವಾಗಿ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಲಾಯಿತು. ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ, ಇಂಧನ ಸಚಿವ ಕೆ.ಜೆ. ಜಾರ್ಜ್, ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಹಾಗೂ ಹುಬ್ಬಳ್ಳಿ–ಧಾರವಾಡ ಶಾಸಕ ಅಬ್ಬಯ್ಯ ಪ್ರಸಾದ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗೋಪಾಲ ಬ್ಯಾಕೋಡ್ ಸೇರಿದಂತೆ ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಶಂಕುತಲಮ್ಮ ವಸತಿ ಶಾಲೆಯ ವಿದ್ಯಾರ್ಥಿಗಳು ನಾಡಗೀತೆ ಹಾಡಿದರು. ಶಂಭಯ್ಯ ಹಿರೇಮಠ ತಂಡದವರು ರೈತಗೀತೆ ಹಾಡಿದರು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸ್ವಾಗತಿಸಿದರು. ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಸಂವಿಧಾನ ಪ್ರತಿಜ್ಞಾ ವಿಧಿ ಬೋಧಿಸಿದರು.

---

### ಫೆ.26ರಂದು ಶ್ರೀ ಸಿದ್ದೇಶ್ವರ ಶ್ರೀಗಳ ಗುರು ಸ್ಮರಣೆ ಕಾರ್ಯಕ್ರಮ: ಡಿ.ಆರ್. ಪಾಟೀಲ

## ಸಿದ್ದೇಶ್ವರ ಶ್ರೀಗಳು ಅವಿಸ್ಮರಣೀಯ




■ ವಿಜಯಸಾಕ್ಷಿ ಸುದ್ದಿ, ಗದಗ

ತಮ್ಮ ತಪಸ್ವಿ ಜೀವನದಿಂದ, ನಿರಂತರ ಅಧ್ಯಯನ ಫಲದಿಂದ, ವಾಣಿಯಲ್ಲಿ ಅಮೃತ ಸಿಂಚನ ಮೂಡಿಸುತ್ತ ಮಹಾ ಬೆಳಕಾಗಿ ಬಾಳಿದ, ಆಧ್ಯಾತ್ಮಿಕ ಪ್ರವಚನ ಪ್ರಪಂಚದಲ್ಲಿ ಪ್ರಖ್ಯಾತರು, ಅವಿಸ್ಮರಣೀಯರಾದ ಶ್ರೀ ಸಿದ್ದೇಶ್ವರ ಶ್ರೀಗಳ ಗುರು ಸ್ಮರಣೆ ಕಾರ್ಯಕ್ರಮ ಫೆ.26ರ ಮುಂಜಾನೆ 11 ಗಂಟೆಗೆ ಎಪಿಎಮ್‌ಸಿ ಪ್ರಾಂಗಣದಲ್ಲಿರುವ ಕೆ.ಎಚ್. ಪಾಟೀಲ ಸಭಾ ಭವನದಲ್ಲಿ ಜರುಗಲಿದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ಹೇಳಿದರು.

ಶನಿವಾರ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಕನ್ನಡ ನಾಡಿದಾದ್ಯಂತ ಅಷ್ಟೇ ಅಲ್ಲದೆ ದೇಶ–ವಿದೇಶದ ವಿವಿಧೆಡೆ ತಮ್ಮ ಪ್ರವಚನಗಳ ಮೂಲಕ ಸಾಮಾನ್ಯ ಜನತೆಗೆ ದಿವ್ಯ ಮಾರ್ಗದರ್ಶನ ಮಾಡಿಸಿದ ಶ್ರೀಗಳು ಅಲ್ಲಮ ಪ್ರಭುದೇವರ ವಚನಗಳ ತಾತ್ಪರ್ಯ ತಿಳಿಸುವ ಅನೇಕ ಗ್ರಂಥಗಳ ರಚನೆ ಮಾಡಿದ್ದು, ಮರೆಯದ ಕಾಣಿಕೆ ನೀಡಿದ್ದಾರೆ.

ಶ್ರೀ ಸಿದ್ದೇಶ್ವರ ಸ್ವಾಮಿಗಳ ಪ್ರವಚನ ಆಲಿಸುವುದು, ಅವರೊಂದಿಗೆ ಒಡನಾಟ ಹೊಂದುವುದು, ಅವರ ಬದುಕನ್ನು ಅವಲೋಕನ ಮಾಡುವುದು, ಅವರ ಸಮಯ ಪಾಲನೆ ಅನುಭವಿಸುವುದು ಹಾಗೂ ಅವರ ಜ್ಞಾನದ ಹರಿವು ಅರಿಯುವುದೊಂದು ಭಾಗ್ಯವಾಗಿದ್ದಿತು. ಗದಗ ಪರಿಸರದಲ್ಲಿ ಅವರು ಅನೇಕ ಉಪನ್ಯಾಸ ನೀಡಿದ್ದು, ನಮ್ಮ ಜನ–ಮನದಲ್ಲಿ ಈಗಲೂ ಹಸಿರಾಗಿದೆ.

ಶ್ರೀ ಸಿದ್ದೇಶ್ವರ ಸ್ವಾಮಿಗಳು ನಮ್ಮನ್ನು ಅಗಲಿದ್ದಾರೆ. ಅವರ ನೆನಪು ನಮಗೆಲ್ಲ ಪ್ರೇರಣಾದಾಯಕವಾಗಿದೆ. ಅದಕ್ಕಾಗಿ ಅವರನ್ನು ನೆನೆದು–ನಮಿಸಿ, ಸ್ಮರಿಸುವ ಪುಣ್ಯ ಪ್ರಸಂಗದಲ್ಲಿ ತಾವು ಸಕಾಲಕ್ಕೆ ಪಾಲ್ಗೊಳ್ಳಬೇಕೆಂದು ಸಂಘಟಕರಾದ ಡಿ.ಆರ್. ಪಾಟೀಲರು ವಿನಂತಿಸಿದಲ್ಲದೆ, ಕಾರ್ಯಕ್ರಮಕ್ಕೆ ಆಗಮಿಸಿದ ಪ್ರತಿಯೊಬ್ಬರಿಗೂ ಶ್ರೀ ಸಿದ್ದೇಶ್ವರ ಸ್ವಾಮಿಗಳ ಭಾವಚಿತ್ರ ಇರುವ ಅವರ ಅಂತಿಮ ಅಭಿವಂದನಾ ಪತ್ರವನ್ನು ನೀಡಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಇದ್ದರು.

---

### ಕನಕ ಭವನ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಕನಕ ಭವನ ಸಮಾಜೋಪಯೋಗಿಯಾಗಲಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕ್ಷೇತ್ರದಲ್ಲಿ ಈ ಹಿಂದೆ ನಾನಾ ವರ್ಗಗಳ ಕಲ್ಯಾಣಕ್ಕಾಗಿ ಅನುದಾನ ಬಿಡುಗಡೆಗೊಳಿಸಿದ್ದೇನೆ. ಆಯಾ ಸಮುದಾಯಗಳ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಸರ್ಕಾರದಿಂದ ಅನುದಾನ ನೀಡಿದ್ದು, ಪಟ್ಟಣದಲ್ಲಿ ನಿರ್ಮಾಣವಾಗಲಿರುವ ಕನಕ ಭವನವನ್ನು ಧಾರ್ಮಿಕ, ಸಾಮಾಜಿಕ ಕಾರ್ಯಗಳಿಗೆ ಬಳಕೆ ಮಾಡಿಕೊಳ್ಳಲು ಮುಂದಾಗಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ನುಡಿದರು.

ಸ್ಥಳೀಯ ಸಿಬಿಎಸ್‌ಸಿ ಶಾಲೆಯ ಎದುರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಗರದಲ್ಲಿ ತಾಲೂಕು ಕುರುಬರ ಸಂಘದಿಂದ ಶನಿವಾರ ನಡೆದ ಕನಕ ಭವನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮುಖಂಡ ಎಚ್.ಎಸ್. ಸೋಂಪೂರ ಮಾತನಾಡಿ, ಪಟ್ಟಣದಲ್ಲಿ ಕನಕ ಭವನ ನಿರ್ಮಾಣಕ್ಕಾಗಿ ಹಲವಾರು ಬಾರಿ ಭೂಮಿ ಪೂಜೆ ನಡೆದರೂ ಸಹ ಕನಕ ಭವನ ನಿರ್ಮಾಣವಾಗಿರಲಿಲ್ಲ. ಆದರೆ, ಶಾಸಕ ಜಿ.ಎಸ್.ಪಾಟೀಲ ಇಂದು ಪಟ್ಟಣದಲ್ಲಿ ಕನಕ ಭವನ ನಿರ್ಮಾಣಕ್ಕಾಗಿ ಭೂಮಿಪೂಜೆ ನೆರವೇರಿಸಿದ್ದು ಸಂತಸ ತಂದಿದೆ. ಎರಡು ವರ್ಷದಲ್ಲಿ ಕನಕ ಭವನ ನಿರ್ಮಾಣವಾಗಲಿದೆ ಎಂದರು.



> ಮೊದಲ ಬಾರಿ ಶಾಸಕನಾಗಿದ್ದ ವೇಳೆ ರೋಣ ಪಟ್ಟಣದಲ್ಲಿ ಕನಕ ಭವನ ನಿರ್ಮಾಣ ಮಾಡಲಾಗಿದೆ. ಈಗ ಪಟ್ಟಣದಲ್ಲಿ ಕನಕ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸುವುದರ ಜತೆಗೆ ರೂ.25 ಲಕ್ಷ ಅನುದಾವನ್ನು ಬಿಡುಗಡೆ ಮಾಡಿರುವ ಆದೇಶ ಪ್ರತಿಯನ್ನು ಹಸ್ತಾಂತರಿಸಲಾಗಿದೆ. ಸಮಾಜದ ದಾನಿಗಳಿಂದ ರೂ.25 ಲಕ್ಷ ಹಣವನ್ನು ಸಂಗ್ರಹಿಸದ ಬಳಿಕ ಸರ್ಕಾರದಿಂದ ಮತ್ತೆ ಕನಕ ಭವನಕ್ಕೆ ರೂ.25 ಲಕ್ಷ ಹಣವನ್ನು ಬಿಡುಗಡೆ ಮಾಡುತ್ತೇನೆ ಎಂದು ಶಾಸಕ ಜಿ.ಎಸ್. ಪಾಟೀಲ ಭರವಸೆ ನೀಡಿದರು.

ಸಮಾಜದ ಮುಖಂಡ ಕಳಕಪ್ಪ ಕಂಬಳಿ ಮಾತನಾಡಿ, ಪಾಲಕರು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದರ ಜತೆಗೆ ಸಮಾಜದ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಎಲ್ಲರೂ ಸಂಘಟಿತರಾಗೋಣ ಎಂದರು.


ಕಲಬುರ್ಗಿ ವಿಭಾಗ ತಿಂಥಣಿ ಬ್ರಿಡ್ಜ್ ಕನಕಗುರು ಪೀಠದ ಸಿದ್ದರಾಮನಂದಪುರಿ ಸ್ವಾಮೀಜಿ, ಕಾಗಿನಲೆ ಶಾಖಾಮಠ ಬಾದಿಮನಾಳದ ಶಿವಶಿದ್ದೇಶ್ವರ ಸ್ವಾಮೀಜಿ, ನಿಡಗುಂದಿ ಧರ್ಮರಮಠ ಷಣ್ಮುಖಪ್ಪಜ್ಜನವರ, ಪ್ಯಾಟಿ ಧರ್ಮರಮಠ ಸಕ್ರಪ್ಪಜ್ಜ ಧರ್ಮರ, ಗುಳಗುಳಿ ಯೋಗಾನಂದ ಆಶ್ರಮದ ಋಷಿಕುಮಾರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

ಸಮಾಜದ ಮುಖಂಡ ವಿ.ಆರ್. ಗುಡಿಸಾಗರ, ಕುರಬರ ಸಂಘದ ತಾಲೂಕಾಧ್ಯಕ್ಷ ಅಂದಪ್ಪ ಬಿಚ್ಚೂರ, ಕೆ.ಎಸ್. ಕೊಡತಗೇರಿ, ನೀಲಪ್ಪ ಬೂದಿಹಾಳ, ದ್ರಾಮಣ್ಣ ಪ್ರಭಣ್ಣವರ, ಶೈಲಜಾ ಚಿಲ್‌ಝುರಿ, ಶರಣಪ್ಪ ಬೆಟಗೇರಿ, ಬಸವರಾಜ ಬೆನಕನವಾರಿ, ನಾಗೇಶ ಲಕ್ಕಲಕಟ್ಟಿ, ರಮೇಶ ವದೆಗೋಳ ಸೇರಿ ಇತರರು ಇದ್ದರು.

---

### ಕೆಆರ್‌ಐಡಿಯಲ್‌ನಿಂದ ಸಿಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

## ತಾಲೂಕಿನ ಸಮಗ್ರ ಅಭಿವೃದ್ಧಿಗೆ ಒತ್ತು



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕಾಂಗ್ರೆಸ್ ಸರ್ಕಾರವು ಗ್ಯಾರಂಟಿಗಳಿಗೆ ಅನುದಾನವನ್ನು ಬಳಕೆ ಮಾಡುತ್ತಿದ್ದು, ರಾಜ್ಯದ ಅಭಿವೃದ್ಧಿಯನ್ನು ಕಡೆಗಣಿಸುತ್ತಿದೆ ಎಂದು ವಿಪಕ್ಷಗಳು ಸುಳ್ಳು ಆರೋಪಗಳನ್ನು ಮಾಡುವ ಮೂಲಕ ಜನತೆಯ ದಿಕ್ಕು ತಪ್ಪಿಸುವ ಕೆಲಸಕ್ಕೆ ಮುಂದಾಗಿದೆ ಎಂದು ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಕಡ್ಡಿ ಅವರ ಗೊಲಗೇರಿ ಅವರ ಪ್ಲಾಟ್‌ನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಅಂದಾಜು ರೂ.1 ಕೋಟಿ ವೆಚ್ಚದಲ್ಲಿ ಕೆಆರ್‌ಐಡಿಯಲ್‌ನಿಂದ ಸಿಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

> ಅಭಿವೃದ್ಧಿಪೂರಕ ಹಾಗೂ ಜನಪರವಾದ ಆಡಳಿತಕ್ಕೆ ಆದ್ಯತೆ ನೀಡುವ ಕಾಂಗ್ರೆಸ್ ಸರ್ಕಾರವನ್ನು ಕೇಂದ್ರದಲ್ಲಿ ಅಧಿಕಾರಕ್ಕೆ ತರಲಿದ್ದು, ಬಿಜೆಪಿ ಸಂಸದರನ್ನು ಜನತೆ ಮನೆಗೆ ಕಳುಹಿಸಲು ನಿರ್ಣಯಿಸಿದ್ದಾರೆ, ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್‌ನ ಅಭ್ಯರ್ಥಿಗಳು ಚುನಾವಣೆಯಲ್ಲಿ ಗೆಲುವು ಸಾಧಿಸಲಿದ್ದಾರೆ. ತಾಲೂಕಿನ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಾಗಿದ್ದು, ರಸ್ತೆ ಅಭಿವೃದ್ಧಿ ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡುವುದರ ಜತೆಗೆ ಶೀಘ್ರದಲ್ಲಿ ಕಾಮಗಾರಿ ಪೂರ್ಣಗೊಳಿಸಿ, ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವು ವಿಧಾನಸಭಾ ಚುನಾವಣಾ ಪೂರ್ವದಲ್ಲಿ ರಾಜ್ಯದ ಜನತೆಗೆ ನೀಡಿದ್ದ ಗ್ಯಾರಂಟಿಗಳನ್ನು ಜಾರಿಗೆ ಮಾಡುವ ಮೂಲಕ ನುಡಿದಂತೆ ನಡೆಯುತ್ತಿರುವುದನ್ನು ವಿಪಕ್ಷಗಳಿಗೆ ಸಹಿಸಲಾಗುತ್ತಿಲ್ಲ. ಹೀಗಾಗಿ ರಾಜ್ಯ ಸರ್ಕಾರದ ಗ್ಯಾರಂಟಿಗಳನ್ನು ಟೀಕಿಸಿದ್ದ ಕೇಂದ್ರ ಸರ್ಕಾರವು ಇಂದು ಕಾಂಗ್ರೆಸ್‌ನ ಗ್ಯಾರಂಟಿಗಳನ್ನು ನಕಲು ಮಾಡುತ್ತಿರುವುದು ಅವರ ದ್ವಂದ್ವ ನೀತಿಗೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಈ ವೇಳೆ ರೋಣ ಹಾಗೂ ಗಜೇಂದ್ರಗಡ ತಾಲೂಕಿನ 27 ಮೀನುಗಾರರಿಗೆ ಶಾಸಕ ಜಿ.ಎಸ್. ಪಾಟೀಲ ಸಲಕರಣೆ ಕಿಟ್ ವಿತರಿಸಿದರು. ಪುರಸಭೆ ವಿಪಕ್ಷ ನಾಯಕ ಮುರ್ತುಜಾ ಡಾಲಾಯತ್, ಸಿದ್ದಣ್ಣ ಬಂಡಿ, ಎ.ಡಿ. ಕೋಲಕಾರ, ಶ್ರೀಧರ ಬಿದರಳ್ಳಿ, ಶಿವರಾಜ ಘೋರ್ಪಡೆ, ರಾಜು ಸಾಂಗ್ಲೀಕರ, ಪ್ರಭು ಚವಡಿ, ಅಪ್ಪು ಮತ್ತಿಕಟ್ಟಿ, ಭಾಷಾ ಮುದಗಲ್, ಸುರೇಶ ಚವಡಿ, ಸುಭಾನಸಾಬ ಮ್ಯಾಗೇರಿ, ಎಚ್.ಎಸ್. ಸೋಂಪುರ, ಶರಣಪ್ಪ ಚಳಗೇರಿ, ವೆಂಕಟೇಶ ಮುದಗಲ್, ಶರಣಪ್ಪ ರೇವಡಿ, ಯಲ್ಲಪ್ಪ ಬಂಕದ ಮುಂತಾದವರಿದ್ದರು.

---

### ಮೇವುಂಡಿ ಜಾಕ್‌ವೆಲ್, ಸೂರಣಗಿಯ ನೀರು ಶುದ್ಧೀಕರಣ ಘಟಕ ಪರಿಶೀಲಿಸಿದ ಶಾಸಕ ಡಾ. ಲಮಾಣಿ

## 2–3 ದಿನಗಳಲ್ಲಿ ಪಟ್ಟಣಕ್ಕೆ ನೀರು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣಕ್ಕೆ ನೀರು ಸರಬರಾಜಾಗುವ ತುಂಗಭದ್ರಾ ನದಿ, ಮೇವುಂಡಿಯಲ್ಲಿನ ಜಾಕ್‌ವೆಲ್, ಪಂಪ್‌ಹೌಸ್ ಮತ್ತು ಸೂರಣಗಿಯ ನೀರು ಶುದ್ಧೀಕರಣ ಘಟಕವನ್ನು ಶನಿವಾರ ಶಾಸಕ ಡಾ.ಚಂದ್ರು ಲಮಾಣಿ ಪರಿಶೀಲಿಸಿದರು.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಅವರು, ತುಂಗಭದ್ರಾ ನದಿಯಲ್ಲಿ ನೀರು ಖಾಲಿಯಾಗಿದ್ದರಿಂದ ಪಟ್ಟಣಕ್ಕೆ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಿದೆ. ಜ.28ರಂದೇ ಭದ್ರಾ ಜಲಾಶಯದ ಅಧಿಕಾರಿಗಳೊಂದಿಗೆ ಮಾತನಾಡಿ, ನೀರು ಬಿಡಿಸುವ ವ್ಯವಸ್ಥೆ ಮಾಡಿದ್ದೇನೆ. ಈ ವರ್ಷ ಮಳೆ ಕೊರತೆಯಿಂದ ಬೇಸಿಗೆ ಪ್ರಾರಂಭದಲ್ಲಿಯೇ ನೀರಿನ ಸಮಸ್ಯೆ ಉಲ್ಬಣವಾಗಿದೆ. ಲಕ್ಷ್ಮೇಶ್ವರ ಪಟ್ಟಣಕ್ಕೆ ಕುಡಿಯುವ ನೀರಿನ ಸಮಸ್ಯೆಯಾಗಿರುವ ಬಗ್ಗೆ ಸದನದಲ್ಲಿಯೂ ವಿಷಯ ಪ್ರಸ್ತಾಪ ಮಾಡಿ ಅನುದಾನ ಕಲ್ಪಿಸುವಂತೆ ಆಗ್ರಹಿಸಿದ್ದೇನೆ ಎಂದರು.

> ಕುಡಿಯುವ ನೀರಿನ ಪೈಪ್‌ಲೈನ್ ಹಳೆಯದಾಗಿದ್ದು, ಹೊಸ ಮಾರ್ಗಕ್ಕೆ ವಿಶೇಷ ಅನುದಾನದೊಂದಿಗೆ 58 ಕೋಟಿ ರೂ ವೆಚ್ಚದ ಕ್ರಿಯಾಯೋಜನೆ ಸಿದ್ಧಪಡಿಸಿ ಅನುದಾನ ತರುವ ಪ್ರಯತ್ನ ಮಾಡುತ್ತಿದ್ದೇನೆ. ಶುಕ್ರವಾರ ನದಿಗೆ ನೀರು ಬಂದಿದ್ದು, 2–3 ದಿನಗಳಲ್ಲಿ ಪಟ್ಟಣದ ಜನತೆಗೆ ನೀರು ಪೂರೈಸುವ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಮತ್ತು ನೀರು ಸರಬರಾಜಿನಲ್ಲಿ ಯಾವುದೇ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ವಹಿಸುವಂತೆ ಸೂಚಿಸಿದ್ದೇನೆ.
>
> **– ಡಾ. ಚಂದ್ರು ಲಮಾಣಿ.**
> ಶಾಸಕರು, ಶಿರಹಟ್ಟಿ.

ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ತುಂಗಭದ್ರಾ ನದಿಗೆ ನೀರು ಬಂದಿದೆ. ನದಿ ಪಾತ್ರದ ಮೇವುಂಡಿ ಜಾಕ್‌ವೆಲ್ ಹತ್ತಿರ ನೀರು ತಡೆಯುವ ತಾತ್ಕಾಲಿಕ ವ್ಯವಸ್ಥೆ ಮಾಡಲಾಗಿದೆ. ಸ್ಯಾಂಡ್ ಬ್ಯಾರೇಜ್ ನಿರ್ಮಿಸಲು ಅನುದಾನಕ್ಕಾಗಿ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದೆ. ನದಿ ಪಾತ್ರದಲ್ಲಿನ ಪಂಪ್‌ಸೆಟ್‌ಗಳನ್ನು ತೆರವು ಮಾಡುವ ಕ್ರಮ ಕೈಗೊಳ್ಳಲಾಗಿದೆ. ನದಿ ನೀರು ಎತ್ತುವಳಿ ಮಾಡುವ ವ್ಯವಸ್ಥೆಯಲ್ಲಿ ಯಾವುದೇ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ. ಹಂತಹಂತವಾಗಿ ಎಲ್ಲ ವಾರ್ಡುಗಳಿಗೆ ನೀರು ಪೂರೈಸಲಾಗುವುದು. ಸಾರ್ವಜನಿಕರು ಬೇಸಿಗೆ ಮುಗಿಯುವವರೆಗೂ ನೀರನ್ನು ಹಿತಮಿತವಾಗಿ ಬಳಸಬೇಕು ಎಂದರು.

ಈ ವೇಳೆ ಪುರಸಭೆ ಸಿಬ್ಬಂದಿ ಮಂಜುನಾಥ ಮುದಗಲ್, ಪರಶುರಾಮ ಮುಳಗುಂದ, ಬಸವರಾಜ ಚಕ್ರಸಾಲಿ, ಶೇಖಪ್ಪ ಕುರ್ತಕೋಟಿ ಇದ್ದರು.

**ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಶ್ನಿಸುವ ಹಕ್ಕಿದೆ: ಅಜ್ಜು ಬೇಪಾರಿ**

# ಶಾಲಾ ಆವರಣದಲ್ಲಿ ಸಿಸಿ ರಸ್ತೆ ಬೇಡ

**■ವಿಜಯಸಾಕ್ಷಿ ಸುದ್ದಿ, ರೋಣ**



ರೋಣ ಅಂಜುಮನ್ ಸಂಸ್ಥೆಯವರು ಸರ್ವಾಧಿಕಾರಿ ಧೋರಣೆಯನ್ನು ಕೈಬಿಟ್ಟು, ಶಾಲಾ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದೃಷ್ಟಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಅಂಜುಮನ್ ಸಂಸ್ಥೆಯ ಮಾಜಿ ನಿರ್ದೇಶಕ, ಯುವ ಮುಖಂಡ ಅಜ್ಜು ಬೇಪಾರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅವರು ಶನಿವಾರ ಎಂಆರ್‌ಬಿಸಿ ಪ್ರವಾಸಿ ಮಂದಿರದ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ರೋಣದ ಪ್ರತಿಷ್ಠಿತ ಅಂಜುಮನ್ ಸಂಸ್ಥೆಯವರು ಶಾಲಾ ಆವರಣದಲ್ಲಿ ಸಿಸಿ ರಸ್ತೆ ನಿರ್ಮಿಸಲು ನಮ್ಮ ವಿರೋಧವಿದೆ. ಶಾಲಾ ಆವರಣದಲ್ಲಿ ಸಿಸಿ ರಸ್ತೆಯನ್ನು ನಿರ್ಮಿಸಿದರೆ ಮಕ್ಕಳ ಕ್ರೀಡಾ ಚಟುವಟಿಕೆಗಳಿಗೆ ಸ್ಥಳವಿಲ್ಲದಂತಾಗುತ್ತದೆ. ಇದನ್ನು ಪ್ರಶ್ನಿಸಿದರೆ ಸಂಸ್ಥೆಯವರು ನನಗೆ ಬೆದರಿಕೆಯೊಡ್ಡುವುದು ಸಮಂಜಸವಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಶ್ನಿಸುವ ಹಕ್ಕಿದೆ ಎಂಬುದನ್ನು ಅವರು ಅರಿಯಬೇಕು ಎಂದು ತಮ್ಮ ಆಕ್ರೋಶವನ್ನು ಹೊರಹಾಕಿದರು.

ಸಮಾಜದ ಅಭಿವೃದ್ಧಿ ಕಾರ್ಯಗಳಿಗೆ ನಮ್ಮ ವಿರೋಧವಿಲ್ಲ. ಬದಲಾಗಿ ಅಭಿವೃದ್ಧಿಯ ನೆಪವೊಡ್ಡಿ ಇಂತಹ ಕಾಮಗಾರಿಗಳನ್ನು ನಡೆಸಲು ನಮ್ಮ ವಿರೋಧವಿದೆ. ಅಲ್ಲದೆ ಈಗ ಸರಕಾರದಿಂದ ಬಿಡುಗಡೆಯಾಗಿರುವ ಅನುದಾನವನ್ನು ಶಾಲಾ ಅಭಿವೃದ್ಧಿ ಅಥವಾ ಶಾದಿ ಮಹಲ್ ಅಭಿವೃದ್ಧಿಗೆ ಬಳಕೆ ಮಾಡಿಕೊಳ್ಳಿ. ಈ ಬಗ್ಗೆ ಸಂಭಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವಸ್ತುಸ್ಥಿತಿಯನ್ನು ಅವಲೋಕಿಸಬೇಕು ಎಂದು ಆಗ್ರಹಿಸಿದರು.

> ಸಮಾಜ ಆರ್ಥಿಕವಾಗಿ ಪ್ರಗತಿ ಹೊಂದುವುದು ಮುಖ್ಯವಲ್ಲ. ಬಡ ಮಕ್ಕಳು ಅಕ್ಷರ ಜ್ಞಾನದಿಂದ ಪ್ರಬಲರಾಗಬೇಕು. ಆಗ ಸಮಾಜ, ಜೊತೆಗೆ ಸಮುದಾಯದ ಕುಟುಂಬಗಳು ತಾವಾಗಿಯೇ ಪ್ರಗತಿಯತ್ತ ಸಾಗುತ್ತವೆ. ಸಮಾಜದ ಮಕ್ಕಳು ಶಿಕ್ಷಣದ ಜೊತೆಗೆ ಕ್ರೀಡೆಯಲ್ಲಿಯೂ ಹಿಂದೆ ಬಿದ್ದಿದ್ದಾರೆ ಎನ್ನುವ ಸತ್ಯವನ್ನು ಅರಿತು ಅಂಜುಮನ್ ಸಂಸ್ಥೆಯವರು ತಮ್ಮ ನಿರ್ಧಾರ ಕೈಗೊಳ್ಳಬೇಕು.
>
> **– ಅಜ್ಜು ಬೇಪಾರಿ, ರೋಣ.**

**ಗ್ರಾಮೀಣಾಭಿವೃದ್ಧಿಯ ಸಂಕಲ್ಪದ ಪಥದಲ್ಲಿ ವಿಶ್ವವಿದ್ಯಾಲಯದ 4ನೆಯ ಘಟಿಕೋತ್ಸವ**

# ಗ್ರಾಮೀಣ ಪರಂಪರೆಯ ಪ್ರತೀಕ



ಗ್ರಾಮೀಣಾಭಿವೃದ್ಧಿ ಸಂಕಲ್ಪದೊಂದಿಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವು ಮಾರ್ಚ್ 6, 2024ರಂದು 4ನೇ ಘಟಿಕೋತ್ಸವಕ್ಕೆ ಸಜ್ಜುಗೊಳ್ಳುತ್ತಿದೆ. ಘಟಿಕೋತ್ಸವವು ವಿಶ್ವವಿದ್ಯಾಲಯ ಸಂಘಟಿಸುವ ಅತ್ಯಂತ ಮುಖ್ಯ ಸಮಾರಂಭವಾಗಿದೆ. ಈ ಸಮಾರಂಭವು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಧಿಯಲ್ಲಿ ಸ್ಮರಣೀಯ ಸಂದರ್ಭವಾಗಿ ನಿಲ್ಲುತ್ತದೆ. ಇದು ವಿದ್ಯಾರ್ಥಿಗಳಿಗೆ ಕಲೆ, ಸಾಹಿತ್ಯ, ಸಂಸ್ಕೃತಿ, ವಾಣಿಜ್ಯ, ವಿಜ್ಞಾನ, ಗ್ರಾಮೀಣಾಭಿವೃದ್ಧಿ ಮೊದಲಾದ ವಿಷಯಗಳಲ್ಲಿ ಪ್ರತಿಭೆಯನ್ನು ಪ್ರದರ್ಶಿಸುವ ಅವಕಾಶವನ್ನು ನೀಡುತ್ತದೆ. ಇದರಿಂದ ಅವರ ಸಾಮಾಜಿಕ, ಸಂಸ್ಕೃತಿಕ, ಕಲೆ ಹಾಗೂ ವೈಜ್ಞಾನಿಕ ದೃಷ್ಟಿಕೋನಗಳು ವಿಕಸಿತಗೊಳ್ಳುತ್ತವೆ.

ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯ ಜೊತೆಗೆ, ವಿದ್ಯಾರ್ಥಿಗಳನ್ನು ಗ್ರಾಮೀಣಾಭಿವೃದ್ಧಿಯ ವಿವಿಧ ಆಯಾಮಗಳಿಗೆ ಕೊಡುಗೆ ನೀಡುವ ಹಿನ್ನೆಲೆಯಲ್ಲಿ ಸದಾ ಸನ್ನದ್ಧವಾಗಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯವು, ಗ್ರಾಮೀಣಾಭಿವೃದ್ಧಿಗೆ ಪೂರಕವಾದ ವಿವಿಧ ವಿಷಯಗಳಲ್ಲಿ ಬೋಧನೆ, ಸಂಶೋಧನೆ, ವಿಸ್ತೀರ್ಣ ಚಟುವಟಿಕೆಗಳನ್ನು ನಡೆಸುತ್ತಾ, ಪದವಿಗಳನ್ನು ನೀಡುತ್ತಾ ಬಂದಿದೆ. ಕಳೆದ 6 ಶೈಕ್ಷಣಿಕ ವರ್ಷಗಳಲ್ಲಿ ಮೂರು ಅರ್ಥಪೂರ್ಣ ಘಟಿಕೋತ್ಸವಗಳನ್ನು ಆಚರಿಸಿದೆ.

ವಿಶ್ವವಿದ್ಯಾಲಯದ ಪ್ರತಿ ಘಟಿಕೋತ್ಸವಕ್ಕೆ ವಿಶ್ವವಿದ್ಯಾಲಯದ ಗಾಂಧಿ ಸಬರಮತಿ ಆಶ್ರಮದಿಂದ ಚಾಲನೆಯನ್ನು ನೀಡಲಾಗುತ್ತದೆ. ಸಮಾರಂಭದಲ್ಲಿ ಭಾಗಿಯಾದ ಗಣ್ಯರೆಲ್ಲರೂ ಆಶ್ರಮದ ಮಹಾತ್ಮ ಗಾಂಧಿ ಪ್ರತಿಮೆಗೆ ಪುಷ್ಪ ನಮನವನ್ನು ಸಲ್ಲಿಸಿ, ಖಾದಿ ಪೋಷಾಕಿನೊಂದಿಗೆ ಮೆರವಣಿಗೆಯಲ್ಲಿ ಪಾಲ್ಗೊಳ್ಳುತ್ತಾರೆ. ಶಬ್ದಗಳ ಸ್ವರಮೇಳ, ಗಣ್ಯರ, ಅಧ್ಯಾಪಕರ, ಪದವಿ ಪಡೆದ ವಿದ್ಯಾರ್ಥಿಗಳಿಂದ ಕೂಡಿದ ಭವ್ಯವಾದ ಈ ಮೆರವಣಿಗೆ, ಪದವೀಧರರನ್ನು ಪ್ರೇರೇಪಿಸುವ ಅತಿಥಿಗಳ ಸ್ಫೂರ್ತಿದಾಯಕ ಭಾಷಣ, ವಿದ್ಯಾರ್ಥಿಗಳು ವೇದಿಕೆ ಉದ್ದಕ್ಕೂ ನಡೆದು ಬಂದು ಪದವಿ ಪ್ರಮಾಣ ಪತ್ರ ಸ್ವೀಕರಿಸುವ ದೃಶ್ಯಗಳು, ಇದನ್ನು ಹುರಿದುಂಬಿಸುವ ಸ್ನೇಹಿತರು ಮತ್ತು ಕುಟುಂಬದವರು ಸಮಾರಂಭದ ಇಂತಹ ಪ್ರತಿಯೊಂದು ಸನ್ನಿವೇಶಗಳು ವಿಶ್ವವಿದ್ಯಾಲಯಕ್ಕೆ ಮತ್ತು ವಿದ್ಯಾರ್ಥಿಗಳಿಗೆ ಅನುಭವವನ್ನು ಕಟ್ಟಿಕೊಡುತ್ತವೆ.

> ಘಟಿಕೋತ್ಸವವು ಮಧ್ಯಕಾಲೀನ ಯುರೋಪ್‌ನಲ್ಲಿ ಪರಿಚಿತವಾದ ಶೈಕ್ಷಣಿಕ ಸಂಪ್ರದಾಯವಾಗಿದೆ. ಘಟಿಕೋತ್ಸವದ ಸಮಾರಂಭಗಳಲ್ಲಿ ಪಾಶ್ಚಾತ್ಯ ಸಂಪ್ರದಾಯಗಳು ಕಂಡುಬರುವುದು ಸಾಮಾನ್ಯ. ಆದರೆ ನಮ್ಮ ವಿಶ್ವವಿದ್ಯಾಲಯ ಆಯೋಜಿಸುವ ಘಟಿಕೋತ್ಸವ ಸಮಾರಂಭವು ಸಂಪೂರ್ಣವಾಗಿ ಗ್ರಾಮೀಣ ಸೊಗಡಿನೊಂದಿಗೆ ಹಾಗೂ ಮಹಾತ್ಮ ಗಾಂಧೀಜಿಯವರ ವಿಚಾರಧಾರೆಗಳೊಂದಿಗೆ ಅನಾವರಣಗೊಂಡಿರುತ್ತದೆ. ಘಟಿಕೋತ್ಸವದಲ್ಲಿ ಭಾಗಿಯಾಗುವ ಗಣ್ಯರು, ಮುಖ್ಯ ಅತಿಥಿಗಳು, ಅತಿಥಿಗಳು, ಪದವೀಧರ ವಿದ್ಯಾರ್ಥಿಗಳು, ಅಧ್ಯಾಪಕರೆಲ್ಲರೂ ಖಾದಿ ದಿರಿಸನ್ನು ಧರಿಸಿ ಸಮಾರಂಭದಲ್ಲಿ ಭಾಗಿಯಾಗುತ್ತಾರೆ. ಇದರೊಂದಿಗೆ ಗ್ರಾಮೀಣ ಪರಂಪರೆಯನ್ನು ಪ್ರತಿನಿಧಿಸುವುದು, ವಿದ್ಯಾರ್ಥಿಗಳನ್ನು ಗ್ರಾಮೀಣಾಭಿವೃದ್ಧಿಗೆ ಅಣಿಗೊಳಿಸುವುದು ಘಟಿಕೋತ್ಸವದ ಮುಖ್ಯ ಉದ್ದೇಶವಾಗಿರುತ್ತದೆ.
>
> **– ಪ್ರಕಾಶ ಎಸ್.ಮೂಚೇನಹಳ್ಳಿ.**
> **ಅಧ್ಯಾಪಕರು, ಕೆ.ಎಸ್.ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯ, ಗದಗ.**

ಗ್ರಾಮೀಣಾಭಿವೃದ್ಧಿ, ಗ್ರಾಮೀಣ ನಿರ್ವಹಣೆ, ಸಮಾಜಕಾರ್ಯ, ವಾಣಿಜ್ಯ, ಆಹಾರ ತಂತ್ರಜ್ಞಾನ, ಭೂ-ಮಾಹಿತಿ ತಂತ್ರಜ್ಞಾನ, ಆಡಳಿತ ಹಾಗೂ ಅರ್ಥಶಾಸ್ತ್ರ ಸೇರಿದಂತೆ ಮೊದಲಾದ ವಿಷಯಗಳಲ್ಲಿ ಉತ್ತೀರ್ಣರಾದ 250ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯವು ಈ ಘಟಿಕೋತ್ಸವದಲ್ಲಿ ಸ್ನಾತಕೋತ್ತರ ಪದವಿಯನ್ನು ಪ್ರದಾನ ಮಾಡಲಿದೆ.

ಘಟಿಕೋತ್ಸವದಲ್ಲಿ ವಿಶ್ವವಿದ್ಯಾಲಯದ 10 ಸ್ನಾತಕೋತ್ತರ ಅಧ್ಯಯನ ಕಾರ್ಯಕ್ರಮಗಳಲ್ಲಿ ಪ್ರಥಮ ಶ್ರೇಣಿಯನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಮತ್ತು ಪ್ರಮಾಣಪತ್ರವನ್ನು ಪ್ರದಾನ ಮಾಡಲಾಗುವುದು. ದ್ವಿತೀಯ ಮತ್ತು ತೃತೀಯ ಸ್ಥಾನವನ್ನು ಗಳಿಸಿದ 20 ವಿದ್ಯಾರ್ಥಿಗಳಿಗೆ ರ‍್ಯಾಂಕ್ ಪ್ರಮಾಣಪತ್ರವನ್ನು ವಿಶ್ವವಿದ್ಯಾಲಯವು ನೀಡಲಿದೆ

ಘಟಿಕೋತ್ಸವದ ಅದ್ದೂರಿ ಸಮಾರಂಭಕ್ಕೆ ಗಣ್ಯರ ಆಗಮನ ಮತ್ತು ಉಪಸ್ಥಿತಿಯು ಮೆರಗನ್ನು ನೀಡಲಿದೆ. ಘಟಿಕೋತ್ಸವದಲ್ಲಿ ಕರ್ನಾಟಕ ರಾಜ್ಯದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಭಾಗಿಯಾಗಿ, ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಿದ್ದಾರೆ. ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಗೌರವ ಡಾಕ್ಟರೇಟ್‌ನ್ನು ಪ್ರದಾನ ಮಾಡುವರು. ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರಾದ ಮತ್ತು ವಿಶ್ವವಿದ್ಯಾಲಯದ ಸಹಕುಲಾಧಿಪತಿಗಳಾದ ಪ್ರಿಯಾಂಕ್ ಖರ್ಗೆ ಉಪಸ್ಥಿತರಿರುವರು. ಕೇಂದ್ರ ಪಂಚಾಯತ್ ರಾಜ್ ಸಚಿವಾಲಯದ ಮಾಜಿ ಜಂಟಿ ಕಾರ್ಯದರ್ಶಿಗಳಾದ ಡಾ. ಟಿ.ಆರ್. ರಘುನಂದನ್ ಘಟಿಕೋತ್ಸವದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಘಟಿಕೋತ್ಸವ ವೇದಿಕೆಯಲ್ಲಿ ಕುಲಪತಿಗಳಾದ ಪ್ರೊ. ವಿಷ್ಣುಕಾಂತ ಚಟಪಲ್ಲಿ, ಕುಲಸಚಿವರಾದ ಪ್ರೊ. ಸುರೇಶ ವಿ. ನಾಡಗೌಡರ, ವಿವಿಧ ನಿಕಾಯಗಳ ಮುಖ್ಯಸ್ಥರುಗಳು, ಮತ್ತು ವಿಶ್ವವಿದ್ಯಾಲಯದ ಕಾರ್ಯನಿರ್ವಾಹಕ ಮಂಡಳಿ ಸದಸ್ಯರುಗಳು, ಶೈಕ್ಷಣಿಕ ಪರಿಷತಿನ ಸದಸ್ಯರುಗಳು ಹಾಜರಿದ್ದು, ಸಮಾರಂಭಕ್ಕೆ ಮತ್ತಷ್ಟು ಮೆರಗನ್ನು ತರಲಿದ್ದಾರೆ.

ಅಂತಿಮವಾಗಿ ವಿಶ್ವವಿದ್ಯಾಲಯದ ಘಟಿಕೋತ್ಸವವು ವಿದ್ಯಾರ್ಥಿಗಳ ಅನುಭವ ಮತ್ತು ಬೆಳವಣಿಗೆಗೆ ಅತ್ಯಂತ ಪ್ರಮುಖ ಘಟ್ಟವಾಗಿ ನಿಲ್ಲುತ್ತದೆ. ಪದವೀಧರರು ಈ ಮೂಲಕ ಶಿಕ್ಷಣದಿಂದ ವಿಶಾಲ ಜಗತ್ತಿಗೆ ತಮ್ಮನ್ನು ತಾವು ಪರಿಚಯಿಸಿಕೊಳ್ಳುತ್ತಾರೆ. ಅವರು ಪಡೆದ ಶಿಕ್ಷಣ, ಮಾಹಿತಿ ಮತ್ತು ಅನುಭವನ್ನು ಸಂಸ್ಕರಿಸಿ ಗ್ರಾಮೀಣ ಸಾಮಾಜಿಕ ಸಂದರ್ಭಕ್ಕೆ ಸೂಕ್ತವಾಗುವ ವಿಚಾರಗಳ ಮತ್ತು ಕ್ರಿಯೆಗಳ ಸುಸಂಗತವಾದ ರೂಪವೊಂದನ್ನು ಸೃಷ್ಟಿಸಬಲ್ಲ ಸಂತುಲಿತವಾದ ಮನಸ್ಸುಗಳಾಗಿ ಹೊರಹೊಮ್ಮಲಿ ಎಂದು ಆಶಿಸುತ್ತಾ, ವಿಶ್ವವಿದ್ಯಾಲಯದ ಘಟಿಕೋತ್ಸವವು ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗಳನ್ನು ಗೌರವಿಸುವುದು ಮಾತ್ರವಲ್ಲದೆ, ಅವರ ಉಜ್ವಲ ಮತ್ತು ಪ್ರಬುದ್ಧ ಭವಿಷ್ಯಕ್ಕಾಗಿ ಶುಭ ಹಾರೈಸುತ್ತದೆ.

# ಉದಯ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ತಿಮ್ಮಾಪೂರ ಗ್ರಾಮದ ಚಿರಾಗ್ ಎಜ್ಯುಕೇಶನಲ್ & ರೂರಲ್ ಡೆವೆಲಪ್‌ಮೆಂಟ್ ಟ್ರಸ್ಟ್‌ನ ಉದಯ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಜರುಗಿತು. ಭಾರತದ ಸಂವಿಧಾನ ಪೀಠಿಕೆಯನ್ನು ಓದುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಡಯಟ್ ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆಯ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ ಮಾತನಾಡಿ, ಮಕ್ಕಳ ಜ್ಞಾನದ ಅಭಿವೃದ್ಧಿಯ ಜೊತೆಗೆ ಮಕ್ಕಳ ಆಸಕ್ತಿ, ಅಭಿರುಚಿ, ಕಲ್ಪನೆ, ಭಾವನೆಗಳನ್ನು ಅರಿತು ಅವರಿಗೆ ಪಾಠವನ್ನು ಮಾಡುವುದು ಹಾಗೂ ಅವರಿಗೆ ಇಷ್ಟವಾಗುವ ಸರಳವಾಗಿ ಹೇಳಿದರೆ ಮಕ್ಕಳು ಕಲಿಕೆಯಲ್ಲಿ ಮುಂದೆ ಬರುತ್ತಾರೆ ಎಂದರು.

ನಿವೃತ್ತ ಪ್ರೊಫೆಸರ್ ಎಂ.ಎಫ್. ಇಂಗಳಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಿ.ಆರ್. ಶಿರಕೋಳ, ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಹನುಮವ್ವ ತಳವಾರ, ಎಂ.ಎಸ್. ಹುಲ್ಲೂರ, ಅಕ್ಕವ್ವ ಹಿರೆಬಸಣ್ಣವರ, ಹುಚ್ಚೀರಪ್ಪ ಜೋಗಿನ, ಲಕ್ಷ್ಮೀ ಗಾಜಿ, ಬಾಳಪ್ಪ ಗಂಗರಾತ್ರಿ, ಹುಸೇನಸಾಬ ನದಾಫ, ಪ್ರಾಧಾನ ಗುರುಗಳಾದ ರೇಣುಕಾ ಅಬ್ಬಿಗೇರಿ ಮುಂತಾದವರು ಪಾಲ್ಗೊಂಡಿದ್ದರು. ನೀಲಮ್ಮ ಗದಗ ಕಾರ್ಯಕ್ರಮವನ್ನು ನಿರೂಪಿಸಿದರು.

# ಸೇವಾ ಮಂದಿರದಲ್ಲಿ ಶಿವಾನುಭವಗೋಷ್ಠಿ ಇಂದು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಶಿಗ್ಲಿ ಗ್ರಾಮದ ಸೇವಾ ಮಂದಿರದಲ್ಲಿ ಕಳೆದ 28 ವರ್ಷಗಳಿಂದ ಪ್ರತಿ ಹುಣ್ಣಿಮೆ ದಿನದಂದು ಆಚರಿಸಿಕೊಂಡು ಬರುತ್ತಿರುವ ಶಿವಾನುಭವಗೋಷ್ಠಿಯ 334ನೇ ಕಾರ್ಯಕ್ರಮ ಫೆ.24ರಂದು ಮುಂಜಾನೆ 11 ಗಂಟೆಗೆ ನಡೆಯಲಿದೆ.

1997ರಲ್ಲಿ ವಿಜಾಪೂರ ಜ್ಞಾನ ಯೋಗಾಶ್ರಮದ ಲಿಂ. ಪೂಜ್ಯ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳಿಂದ ಉದ್ಘಾಟನೆಗೊಂಡ ಶಿವಾನುಭವಗೋಷ್ಠಿ ಕಾರ್ಯಕ್ರಮ 28 ವರ್ಷಗಳ ಕಾಲ ಪ್ರತಿ ಹುಣ್ಣಿಮೆಗೆ ನಡೆದುಕೊಂಡು ಬರುತ್ತಿರುವದು ಇಲ್ಲಿನ ವಿಶೇಷವಾಗಿದೆ. ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಪೂಜ್ಯ ಶ್ರೀ ಚನ್ನವೀರ ಮಹಾಸ್ವಾಮಿಗಳು ವಹಿಸಲಿದ್ದಾರೆ. ಸೇವಾ ಮಂದಿರದ ಶ್ರೀ ಇಷ್ಟಲಿಂಗ ಮಹಾಸ್ವಾಮಿಗಳು ಉಪಸ್ಥಿತಿ ವಹಿಸಲಿದ್ದಾರೆ.

ಸಭೆಯ ಅಧ್ಯಕ್ಷತೆಯನ್ನು ಹಿರಿಯ ಜಾನಪದ ಸಾಹಿತಿ ಡಾ. ಶಂಭು ಬಳಿಗಾರ ವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ದಿ. ಎಂ.ವಿ. ಲೋಹಾರ ಗುರುಗಳ ಸಂಸ್ಮರಣಾ ಮೇರುಗುರು ಗ್ರಂಥವನ್ನು ಡಾ. ಎಸ್.ಪಿ. ಬಳಿಗಾರ ಬಿಡುಗಡೆಗೊಳಿಸಲಿದ್ದಾರೆ. ಶಿಕ್ಷಕ ಎನ್.ಡಿ. ಮೇಗಿಲಮಿ ಗ್ರಂಥ ವಿಶ್ಲೇಷಣೆ ಮಾಡುವರು. ಅತಿಥಿಗಳಾಗಿ ತಹಸೀಲ್ದಾರ ವಾಸುದೇವ ಸ್ವಾಮಿ, ಎಚ್ಚರಪ್ಪ ಬಡಿಗೇರ, ಡಾ. ಪಿ.ಡಿ. ತೋಟದ, ಡಾ. ವೈ.ಎಫ್. ಹಂಜಿ, ಕಸ್ತೂರೆಮ್ಮ ಹಿರೇಮಠ, ಶಂಕರ ರಾಗಿ, ಡಾ.ಎನ್.ಕೆ. ಕಾಳಪ್ಪನವರ, ಮಂಜುನಾಥ ನಾವಿ, ಗುರಪ್ಪಜ್ಜ ಶೆಟ್ಟರ, ಶಿವಣ್ಣನವರು ಭಂಡಾರಿ, ಡಾ. ವಿ.ಬಿ. ಮೇಲ್ಮುರಿ, ಜಯಣ್ಣ ಬೋರಗಾಂವಕರ ಹಾಗೂ ಕಸಾಪ ಶಿಗ್ಲಿ ಹೋಬಳಿ ಘಟಕದ ಸರ್ವ ಸದಸ್ಯರು ಪಾಲ್ಗೊಳ್ಳುವರು. ಇದೇ ಸಂದರ್ಭದಲ್ಲಿ ಸುಂದರಮ್ಮ ಲೋಹಾರ ಹಾಗೂ ಸಂಪಾದಕ ಮಂಡಳಿಯವರಿಗೆ ಸನ್ಮಾನ ನೆರವೇರಲಿದೆ ಎಂದು ಸಂಘಟಿಕರು ತಿಳಿಸಿದ್ದಾರೆ.

# ಕೆಎಲ್‌ಇ ತಾಂತ್ರಿಕ ವಿವಿಗೆ ಮತ್ತೊಂದು ಗರಿ



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಡಸಾಲ್ಟ್ ಸಿಸ್ಟಮ್ಸ್ ಹುಬ್ಬಳ್ಳಿಯಲ್ಲಿರುವ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯವನ್ನು ತನ್ನ ಜಾಗತಿಕ ಕಾರ್ಯಕ್ರಮದ ಅಡಿಯಲ್ಲಿ '3ಡಿ ಎಕ್ಸ್‌ಪೀರಿಯನ್ಸ್ ಎಜುಕೇಶನ್ ಸೆಂಟರ್ ಆಫ್ ಎಕ್ಸಲೆನ್ಸ್' ಎಂದು ಘೋಷಿಸಿದೆ.

ವಿಷುಯಲ್ ಇಂಟೆಲಿಜೆನ್ಸ್, ಎಐ ರಿಸರ್ಚ್, ಇಂಟೆಲಿಜೆಂಟ್ ಮೊಬಿಲಿಟಿ, ಎಲೆಕ್ಟ್ರಿಕ್ ವೆಹಿಕಲ್ಸ್, ಮೆಟೀರಿಯಲ್ ಸೈನ್ಸಸ್ ಮತ್ತು ಎನರ್ಜಿ ಮತ್ತು ಎನ್ವಿರಾನ್ಮೆಂಟ್ ಮೇಲೆ ಕೇಂದ್ರೀಕರಿಸಿದ 'ಸ್ಟಾರ್ ಲ್ಯಾಬ್ಸ್' ಎಂದು ಕರೆಯಲ್ಪಡುವ ಆರು ಪ್ರಮುಖ ಪ್ರಯೋಗಾಲಯಗಳನ್ನು ಸ್ಥಾಪಿಸುವ ಮೂಲಕ ವಿಶ್ವವಿದ್ಯಾನಿಲಯದ ಸಮರ್ಪಣೆಯನ್ನು ಮತ್ತಷ್ಟು ಪ್ರದರ್ಶಿಸಲಾಯಿತು.

ಈ ಕೇಂದ್ರಗಳು ಭೌತಿಕ ಉಪಕರಣಗಳನ್ನು ಡಸಾಲ್ಟ್ ಸಿಸ್ಟಮ್ಸ್‌ನ '3ಡಿ ಎಕ್ಸ್‌ಪೀರಿಯನ್ಸ್ ವರ್ಚುವಲ್ ಪ್ಲಾಟ್‌ಫಾರ್ಮ್ ನೊಂದಿಗೆ ಸಂಯೋಜಿಸುತ್ತವೆ, ಇದು ದತ್ತಾಂಶ ವಿಜ್ಞಾನ, ವರ್ಚುವಲ್ ಅವಳಿ ಅನುಭವಗಳು, 3ಡಿ ಮುದ್ರಣ, ಡಿಜಿಟಲ್ ಲಾಜಿಸ್ಟಿಕ್ಸ್ ಮತ್ತು ಹೆಚ್ಚಿನ ಕ್ಷೇತ್ರಗಳಲ್ಲಿ ಕೌಶಲ್ಯಗಳನ್ನು ಪಡೆಯಲು ಅನುವು ಮಾಡಿಕೊಡುತ್ತದೆ.

'ಇಂಜಿನಿಯರಿಂಗ್ ಶಿಕ್ಷಣದಲ್ಲಿ ಪರಿವರ್ತನೆಗಳ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ'ದಲ್ಲಿ ಈ ಸಾಧನೆಯ ಪ್ರಕಟಿಸಲಾಯಿತು.

ಕೆಎಲ್‌ಇಟಿಯುನ ಉಪಕುಲಪತಿ ಪ್ರೊ. ಅಶೋಕ್ ಶೆಟ್ಟರ್ ಈ ಬಗ್ಗೆ ಮಾತನಾಡಿ, ಜಾಗತಿಕವಾಗಿ ಸ್ಪರ್ಧಾತ್ಮಕವಾಗಿರುವ ಪ್ರತಿಭೆ ಮತ್ತು ಜ್ಞಾನದೊಂದಿಗೆ ಉದ್ಯಮಕ್ಕೆ ಉತ್ತಮ ಸೇವೆ ನೀಡಲು ಕೆಎಲ್‌ಇಟಿಯು ತನ್ನದೇ ಪರಿವರ್ತನೆಗೆ ಒಳಗಾಗುತ್ತದೆ. ತಂತ್ರಜ್ಞಾನ, ಉದ್ಯಮದ ಪರಿಣತಿ ಮತ್ತು ಆಧುನಿಕ ಯೋಜನೆ-ಚಾಲಿತ ಕಲಿಕಾ ವಿಧಾನಗಳಲ್ಲಿನ ನಮ್ಮ ನಿರಂತರ ಹೂಡಿಕೆಯು ನಮ್ಮ ವಿವಿಧ ಪ್ರಯೋಗಾಲಯಗಳನ್ನು ಸಂಪರ್ಕಿಸುವಲ್ಲಿ ಹೊಸ ದೃಷ್ಟಿಕೋನಗಳನ್ನು ತೆರೆಯುತ್ತದೆ ಎಂದರು.

ನಮ್ಮ ಗ್ರಾಹಕರು ಸ್ಪರ್ಧಾತ್ಮಕ ಕೌಶಲ್ಯ ಮತ್ತು ಸಾಮರ್ಥ್ಯಗಳನ್ನು ಹೊಂದಿರುವ ವಿದ್ಯಾರ್ಥಿಗಳು ಮತ್ತು ವೃತ್ತಿಪರರನ್ನು ನಿರೀಕ್ಷಿಸಬಹುದು. ಈ ನಿಶ್ಚಿತಾರ್ಥದೊಂದಿಗೆ, ಕೆಎಲ್‌ಇಟಿಯು ಭವಿಷ್ಯದ ಸ್ಮಾರ್ಟ್ ಉತ್ಪಾದನಾ ವರ್ಧಿಸುವ ಕಾರ್ಖಾನೆಗಳನ್ನು ಮೀರಿ ಯೋಜನೆಗಳನ್ನು ಕಲಿಸಲು ಮತ್ತು ಕಾರ್ಯಗತಗೊಳಿಸಲು ಅಗತ್ಯವಾದ ಪರಿಣತಿಯನ್ನು ಸಹ ನೀಡುತ್ತದೆ ಎಂದು ಡಸಾಲ್ಟ್ ಸಿಸ್ಟಮ್ಸ್‌ನ ಭಾರತದ ವ್ಯವಸ್ಥಾಪಕ ನಿರ್ದೇಶಕ ದೀಪಕ್ ಎನ್.ಜಿ ಹೇಳಿದರು.

**ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ ಮನೆಗಳು ಕಳಪೆ**

# ಫಲಾನುಭವಿಗಳಿಂದ ಅಧಿಕಾರಿಗಳ ವಿರುದ್ಧ ಪ್ರತಿಭಟನೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿಯಲ್ಲಿ ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ ಮನೆಗಳು ಸಂಪೂರ್ಣ ಕಳಪೆಯಾಗಿವೆ. ಗುತ್ತಿಗೆದಾರರು ಕಳಪೆ ಗುಣಮಟ್ಟದ ಮತ್ತು ಕಡಿಮೆ ಪ್ರಮಾಣದ ಸಾಮಗ್ರಿಗಳನ್ನು ನೀಡಿ ಫಲಾನುಭವಿಗಳಿಗೆ ವಂಚಿಸುತ್ತಿದ್ದಾರೆ ಎಂದು ಆರೋಪಿಸಿ ಶನಿವಾರ ಫಲಾನುಭವಿಗಳು ಪ್ರತಿಭಟನೆ ನಡೆಸಿದರು. ಸೇರಿದ್ದ ಫಲಾನುಭವಿಗಳು ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ಪ್ರದರ್ಶಿಸಿ ಆಕ್ರೋಶ ವ್ಯಕ್ತಪಡಿಸಿದರು.




ಈ ವೇಳೆ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ, ಯುವ ಮುಖಂಡ ನಾಗರಾಜ ಚಿಂಚಲಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಬಸವರಾಜ ಹಿರೇಮನಿ, ಬಸವರಾಜ ಕಲ್ಲೂರ ಮುಂತಾದವರು ಕೊಳಚೆ ನಿರ್ಮೂಲಮ ಮಂಡಳಿಯಿಂದ ನಿರ್ಮಾಣಗೊಳ್ಳುತ್ತಿರುವ ಮನೆಗಳು ಸಂಪೂರ್ಣ ಕಳಪೆಯಾಗಿದ್ದು ಫಲಾನುಭವಿಗಳಿಗೆ ದೊಡ್ಡ ಪ್ರಮಾಣದ ಅನ್ಯಾಯವೇ ನಡೆಯುತ್ತಿದೆ ಎಂದು ಆರೋಪಿಸಿದರು.

ಈ ಬಗ್ಗೆ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಇಲಾಖೆಯರುವ ಶೀಘ್ರ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಈ ಪ್ರತಿಭಟನೆ ಉಗ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದು ಎಚ್ಚರಿಸಿದರು.

> ಸರಕಾರದಿಂದ ಮನೆ ನಿರ್ಮಾಣಕ್ಕಾಗಿ ಪ್ರತಿ ಫಲಾನುಭವಿಗೆ 6.39 ಲಕ್ಷ ರೂಗಳನ್ನು ನೀಡುತ್ತಿದೆ. ಆದರೆ ಸದರಿ ಮನೆಗಳನ್ನು ನಿರ್ಮಿಸುತ್ತಿರುವ ಗುತ್ತಿಗೆದಾರರು ನೀಡುತ್ತಿರುವ ಕಚ್ಚಾ ಸಾಮಗ್ರಿಗಳ ಬೆಲೆ ಅಂದಾಜು 2.80-3 ಲಕ್ಷ ರೂಗಳಷ್ಟು ಮಾತ್ರ ಆಗುತ್ತಿದೆ. ಮನೆ ನಿರ್ಮಿಸಲು ನೀಡುತ್ತಿರುವ ಸಿಮೆಂಟ್, ಕಬ್ಬಿಣ, ಎಂಸ್ಯಾಂಡ್, ಖಡಿ, ಕಿಟಕಿ, ಬಾಗಿಲು, ಸೇರಿದಂತೆ ಎಲ್ಲವೂ ಅತ್ಯಂತ ಕಳಪೆ ಗುಣಮಟ್ಟದ್ದಾಗಿವೆ. ಒಂದು ಮನೆಯಿಂದ ಲಕ್ಷಾಂತರ ರೂ. ಹಣ ಹೊಡೆಯುವ ಹುನ್ನಾರವೇ ನಡೆದಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ತಾಲೂಕು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೇದಿಕೆಯ ಅಧ್ಯಕ್ಷ ಸುರೇಶ್ ಹಟ್ಟಿ, ಮಂಜುನಾಥ ಮುಳಗುಂದ, ನೂರಹ್ಮದ ಶಿಗ್ಗಾಂವಿ, ಜಾವಿದಖಾನ್ ಸಿದ್ದಿ, ಸುಲ್ತಾನಭಾಷಾ ಸಿದ್ದಿ, ಬಸವರಾಜ ಪೂಜಾರ, ಚಂದ್ರು ಮಾಗಡಿ, ಈರಣ್ಣ ಶಿರಕೋಳ, ಪ್ರವೀಣ ಕಮಡೊಳ್ಳಿ, ರೇಣುಕಾ ಮುಳಗುಂದ, ಬಸವರಾಜ ಪೂಜಾರ, ಕೊಟ್ರಮ್ಮ ದ್ಯಾಮಣ್ಣವರ, ಚಿನ್ನಮ್ಮ ಕಮಡೊಳ್ಳಿ, ಬಸವರಾಜ ಪಾಣಿಗಟ್ಟಿ, ರತ್ನವ್ವ ಗೋಡಿ ಸೇರಿದಂತೆ ನೂರಾರು ಫಲಾನುಭವಿಗಳು ಪಾಲ್ಗೊಂಡಿದ್ದರು.

# ವೃದ್ಧರು ನಮಗೆ ಮಾರ್ಗದರ್ಶಕರಿದ್ದಂತೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜಕ್ಕೆ ಹಿರಿಯರ ಮಾರ್ಗದರ್ಶನ, ಸಹಕಾರ ಅವಶ್ಯವಾಗಿದೆ. ಅವರ ಅನುಭವದ ಮಾತುಗಳು ನಮಗೆಲ್ಲ ಪ್ರೇರಣೆ ನೀಡುತ್ತವೆ. ಅದಕ್ಕಾಗಿ ಹಿರಿಯನ್ನು ಸದಾ ಗೌರವದಿಂದ ಕಾಣಬೇಕು. ಇದು ನಮ್ಮನ್ನು ಸದಾ ಕಾಲ ರಕ್ಷಿಸುತ್ತದೆ ಎಂದು ಕ್ರೈಂ ವಿಭಾಗದ ನಿವೃತ್ತ ಪಿಎಸ್‌ಐ ಪ್ರೇಮಕ್ಕ ಬಡಿಗೇರ ಹೇಳಿದರು.

ಅವರು ಪಟ್ಟಣದ ಜಿ.ಎಫ್. ಉಪನಾಳ ಪ್ರತಿಷ್ಠಾನದ ಶಾಂತಿಧಾಮ ವೃದ್ಧಾಶ್ರಮದಲ್ಲಿ ಉಗ್ರಾಣ ನಿಗಮದ ನಿವೃತ್ತ ವ್ಯವಸ್ಥಾಪಕ ಬಸಪ್ಪ ಬಡಿಗೇರ ಅವರ 75ನೇ ವರ್ಷದ ಜನ್ಮದಿನದಂದು ಇಲ್ಲಿನ ವೃದ್ಧರಿಗೆ ಗೌರವ ಸಲ್ಲಿಸುವ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಮನೆಯಲ್ಲಿ ಹಿರಿಯರು ನೀಡುವ ಸಲಹೆ-ಸೂಚನೆಗಳು ಮೌಲ್ಯಯುತವಾಗಿರುತ್ತವೆ. ಬಸಪ್ಪ ಬಡಿಗೇರ ಅವರ ಜನ್ಮದಿನೋತ್ಸವವನ್ನು ಸರಳ ಮತ್ತು ಅರ್ಥಪೂರ್ಣವಾಗಿ ಆಚರಿಸುತ್ತಿರುವುದು ಎಲ್ಲರಿಗೂ ಮಾದರಿಯಾಗಿದೆ ಎಂದರು.

ಬಸಪ್ಪ ಬಡಿಗೇರ ಮಾತನಾಡಿ, ನನ್ನ ತಂದೆ-ತಾಯಿಯರನ್ನು ಚಿಕ್ಕ ವಯಸ್ಸಿನಲ್ಲಿ ಕಳೆದುಕೊಂಡ ನನಗೆ ವೃದ್ಧಾಶ್ರಮದ ಹಿರಿಯರು ಅಥವಾ ನನ್ನ ಸಮಕಾಲೀನರನ್ನು ಗೌರವಿಸುವ ಸೌಭಾಗ್ಯ ದೊರೆತಿರುವದು ನನ್ನ ಪುಣ್ಯವಾಗಿದೆ. ಶಾಂತಿಧಾಮ ವೃದ್ಧಾಶ್ರಮ ನಿಜಕ್ಕೂ ಉತ್ತಮ ಕಾರ್ಯ ಮಾಡುತ್ತಿದ್ದು, ನೊಂದ ಜೀವಿಗಳ ಪಾಲಿಗೆ ಆಶಾಕಿರಣವಾಗಿದೆ ಎಂದರು.

ಸಭೆಯ ಅಧ್ಯಕ್ಷತೆಯನ್ನು ಪ್ರತಿಷ್ಠಾನದ ಉಪಾಧ್ಯಕ್ಷ ದಿಗಂಬರ ಪೂಜಾರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವೀರಣ್ಣ ಬಡಿಗೇರ, ರಾಜೇಶ ಬಡಿಗೇರ, ಮೌನೇಶ ಬಡಿಗೇರ, ವಿರೇಶ ಬಡಿಗೇರ, ಸೋಮಪ್ಪ ಬಡಿಗೇರ, ಗಂಗಾಧರ ಬಾಲೇಹೊಸೂರು ಸೇರಿದಂತೆ ಶಿಕ್ಷಕರು, ಅಭಿಮಾನಿಗಳು ಹಾಜರಿದ್ದರು. ವೃದ್ಧಾಶ್ರಮದ ಮೇಲ್ವಿಚಾರಕಿ ಸುನೀತಾ ಜಿ.ನಿರೂಪಿಸಿದರು.

# ಡಾ.ಸಿದ್ದರಾಮ ಸ್ವಾಮಿಗಳ 284ನೇ ವರ್ಷದ ಮಹಾರಥೋತ್ಸವ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಹೊಸ ಪರಿವರ್ತನೆಗೆ ಸಾಕ್ಷಿಯಾಗುವ ಮೂಲಕ ಪ್ರಸಿದ್ಧವಾಗಿರುವ ಡಂಬಳದ ತೋಂಟದ ಡಾ.ಸಿದ್ದರಾಮ ಸ್ವಾಮಿಗಳ 284ನೇ ವರ್ಷದ ಮಹಾರಥೋತ್ಸವ ಶನಿವಾರ ಸಾಯಂಕಾಲ ಮಘಾ ನಕ್ಷತ್ರದಲ್ಲಿ ಸಾವಿರಾರು ಭಕ್ತರ ಜಯಘೋಷದೊಂದಿಗೆ ನೆರವೇರಿತು.




ತೇರಿನ ಮುಂದೆ ಸಿದ್ದಲಿಂಗೇಶ್ವರರು ರಚಿಸಿದ ಷಟ್‌ಸ್ಥಲ ಜ್ಞಾನ ಸಾರಾಮೃತ ಹಾಗೂ ತಾಳೆಗರಿಯಲ್ಲಿ ರಚಿಸಿದ ವಚನ ಕಟ್ಟುಗಳನ್ನು ಇರಿಸಿದ ಅಡ್ಡಪಲ್ಲಕ್ಕಿ ಮೆರವಣಿಗೆ ನಡೆಯಿತು. 20ನೇ ನೂತನ ಪೀಠಾಧಿಪತಿಗಾಳದ ತೋಂಟದ ಡಾ. ಸಿದ್ದರಾಮ ಸ್ವಾಮಿಗಳು ತೇರಿನ ಮುಂದೆ ಪಾದಚಾರಿಯಾಗಿ ಸಾಗುವ ಮೂಲಕ ಚಾಲನೆ ನೀಡಿದರು.

ಅಣ್ಣಿಗೇರಿ ಕರಡಿ ಮೇಳ, ಜಾಂಜ್ ಮೇಳ, ಡೊಳ್ಳು ಕುಣಿತ, ವಾದ್ಯಮೇಳ ವೈಭವಗಳಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ರಥ ಸಾಗಿತು. ಗದಗ, ಮುಂಡರಗಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಆಗಮಿಸಿದ್ದರು. ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ, ಧಾರವಾಡ ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ದೇವಪ್ಪ ಬಂಡಿಹಾಳ, ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಎಮ್.ಎಸ್. ಅಂಗಡಿ, ಜಿ.ವಿ. ಹಿರೇಮಠ ಜಾತ್ರಾ ಕಮಿಟಿ ಅಧ್ಯಕ್ಷ ಬಸವರಾಜ ಹಮ್ಮಿಗಿ, ಉಪಾಧ್ಯಕ್ಷ ಭೀಮಪ್ಪ ಗದಗಿನ, ಕಾರ್ಯದರ್ಶಿ ಅಶೋಕ ಮಾನೆ, ಖಜಾಂಚಿ ಮಲ್ಲಣ್ಣ ರೇವಡಿ ಸೇರಿದಂತೆ ವಿವಿಧ ಸಮಿತಿಗಳ ಪದಾಧಿಕಾರಿಗಳು ಪಾಲ್ಗೊಂಡು ಭಕ್ತಿ ಮೆರೆದರು. ಮಹಾರಥೋತ್ಸವದ ನಿಮಿತ್ತ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

## ಗಮಕಕಲಾ ಪರಿಷತ್ತಿನ ಅಧ್ಯಕ್ಷರ ಮರುನೇಮಕ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಗಜೇಂದ್ರಗಡ ತಾಲೂಕು ಗಮಕಕಲಾ ಪರಿಷತ್ತಿನ ಅಧ್ಯಕ್ಷರಾಗಿ ರೋಣ ತಾಲೂಕಿನ ವಿಕಲಚೇತನರ ಸಂಘ(ರಿ)ದ ಅಧ್ಯಕ್ಷರಾದ ಚಂದ್ರಾಮ ಶ್ರೀಪಾದ ಭಟ್ ಗ್ರಾಮ ಪುರೋಹಿತ ಅವರನ್ನು ಈ ಮೊದಲು ನೇಮಿಸಿದ್ದ ರಾಜಶೇಖರಗೌಡ ಅಂದಾನಗೌಡ ಪಾಟೀಲ ಅವರ ಬದಲಾಗಿ ಮರು ನೇಮಕ ಮಾಡಲಾಗಿದೆ ಎಂದು ಪರಿಷತ್‌ನ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಡಾ.ಸಂಗಮೇಶ ತಮ್ಮನಗೌಡ್ರ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಗುರುವಂದನ, ಸ್ನೇಹ ಸಮ್ಮಿಲನ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರಕಾರಿ ಪ್ರೌಢಶಾಲೆಯಲ್ಲಿ ಸನ್ 1995–96ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಕಲಿತ ವಿದ್ಯಾರ್ಥಿಗಳಿಂದ ಫೆ.25ರಂದು ಬೆಳಿಗ್ಗೆ 10 ಗಂಟೆಗೆ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ನಡೆಯಲಿದೆ.

ಸಮಾರಂಭದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಬಿ.ಆರ್. ಗದುಗಿನ ವಹಿಸಲಿದ್ದು, ಪ್ರಾಥಮಿಕ ಹಾಗೂ ಪ್ರೌಢಶಾಲೆಯ ನಿವೃತ್ತ ಶಿಕ್ಷಕರಾದ ಎಸ್.ವಾಯ್. ಬೂದಿಹಾಳ, ಆರ್.ಬಿ. ತಳವಾರ, ಟಿ.ಟಿ. ದಾಸರ, ಎಸ್.ಬಿ. ಗುಳಗಣ್ಣವರ, ಬಿ.ವಿ. ಬಳಗೇರ, ಎಮ್. ವಾಯ್. ಹಳೇಮನಿ, ಎಸ್.ಆರ್. ಬಾಗಲಿ, ಸಿ.ಎಂ. ವಡಗೇರಿ, ಎಚ್. ಬಂಡೆನ್ನವರ ಹಾಗೂ ದ್ವಿ.ದ.ಸ ಎನ್.ಬಿ. ಹಿರೇಮನಿ, ಡಿ.ದರ್ಜೆಯ ನೌಕರ ಅಯ್ಯಪ್ಪ ತಿಲಗರ, ನಿವೃತ್ತ ಡಿ.ದರ್ಜೆ ನೌಕರ ಎಚ್.ವಾಯ್. ಮಣ್ಣೊಡ್ಡರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಗಲಕೋಟೆಯ ಡಾ. ಎಂ.ಎಸ್. ಮಧುರಕರರಿಗೆ ರಂಭಾಪುರಿ ಪೀಠದ ವರ್ಷದ ಗೌರವ


# ‘ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ’ ಘೋಷಣೆ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಪ್ರತಿ ವರುಷ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದಂದು ನೀಡುತ್ತ ಬಂದಿರುವ ‘ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ’ಯನ್ನು ಈ ವರ್ಷ ಬಾಗಲಕೋಟೆಯ ಅಂಗವಿಕಲೆ ಡಾ. ಮಹಜಬೀನ ಎಸ್.ಮಧುರಕರ ಅವರಿಗೆ ಪ್ರದಾನ ಮಾಡಲಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದರು.

ಶ್ರೀ ಪೀಠದಲ್ಲಿ ಜರುಗಿದ ಪೌರ್ಣಿಮೆ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಪ್ರಥಮ ಪ್ರಕಟಣೆ ಬಿಡುಗಡೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡುತ್ತಿದ್ದರು.

ಡಾ. ಮಹಾಜಬೀನ ಮಧುರಕರ ಅವರು ಅಂಗವಿಕಲರಿಗಾಗಿ ವಿಶೇಷ ಸಾಮಾಜಿಕ ಸೇವೆ ಸಲ್ಲಿಸಿದ್ದನ್ನು ಪರಿಗಣಿಸಿ ಈ ಪ್ರಶಸ್ತಿಗೆ ಅವರನ್ನು ಆಯ್ಕೆ ಮಾಡಿದೆ. ಅವರು ಚರ್ಮ ಚಿಕಿತ್ಸೆಗೆ ಸಂಬಂಧಪಟ್ಟಂತೆ ವಿಶೇಷ ಪರಿಣಿತಿ ಹೊಂದಿದ್ದು, ಎಂಬಿಬಿಎಸ್ ಪರೀಕ್ಷೆಯಲ್ಲಿ ಚಿನ್ನದ ಪದಕದೊಂದಿಗೆ ವೈದ್ಯಕೀಯ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ರಾಜ್ಯ ಸರ್ಕಾರ ಅಂಗವಿಕಲರ ದಿನಾಚರಣೆ ಅಂಗವಾಗಿ ‘ರಾಜ್ಯ ಪ್ರಶಸ್ತಿ’ ನೀಡಿ ಗೌರವಿಸಿದೆ. ಬಾಗಲಕೋಟೆಯಲ್ಲಿ ವಾಸವಿ ಸ್ಕಿನ್ ಕೇರ್ ಕ್ಲಿನಿಕ್ ಹೆಸರಿನಲ್ಲಿ ಪ್ರಾದೇಶಿಕ ಚರ್ಮರೋಗ ಕೇಂದ್ರ ನಡೆಸುತ್ತಿದ್ದಾರೆ. ಪ್ರಶಸ್ತಿಯು ಸ್ಮರಣಿಕೆ, ವಿಶೇಷ ಪ್ರಶಸ್ತಿ ಹಾಗೂ 1 ಲಕ್ಷ ರೂ. ಮೊತ್ತವನ್ನು ಒಳಗೊಂಡಿದೆ. ಮಾರ್ಚ್ 22ರ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದು ತಿಳಿಸಿ, ಮಾರ್ಚ್ 20ರಿಂದ 26ರವರೆಗೆ ಜರುಗುವ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ವಿವರಗಳನ್ನು ನೀಡಿದರು.



ಮಾರ್ಚ್ 20ರಂದು ಧ್ವಜಾರೋಹಣ ಮತ್ತು ಹರಿದ್ರಾಲೇಪನದೊಂದಿಗೆ ಕಾರ್ಯಕ್ರಮಗಳು ಪ್ರಾರಂಭಗೊಂಡು, ಮಾ. 21ಕ್ಕೆ ಕುಂಕುಮೋತ್ಸವ ಮತ್ತು ಶ್ರೀ ವೀರಭದ್ರಸ್ವಾಮಿ ಚಿಕ್ಕರಥೋತ್ಸವ ಜರುಗುವುದು. ಮಾ. 22ರಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ನಡೆಯುವುದು. ಮಾ. 23ರಂದು ಶಯನೋತ್ಸವ ಹಾಗೂ ದೀಪೋತ್ಸವ, ಮಾ. 24ರಂದು ಶ್ರೀ ಶಿವಾನಂದ ಎಸ್ಟೇಟಿನಲ್ಲಿ ಪೂಜಾ ಪ್ರಸಾದ ಹಾಗೂ ಕೆಂಡಾರ್ಚನೆ ಜರುಗುವುದು. ಮಾ. 25ರಂದು ವಸಂತೋತ್ಸವ ಹಾಗೂ ಮಾ.26ರಂದು ಭದ್ರಾ ನದಿ ತೀರದಲ್ಲಿ ಸುರಗಿ ಸಮಾರಾಧನೆಯೊಂದಿಗೆ ಎಲ್ಲ ಕಾರ್ಯಕ್ರಮಗಳು ಮಂಗಲಗೊಳ್ಳುತ್ತವೆ.

ಈ ದಿನಗಳಲ್ಲಿ ಜರುಗುವ ಸಭೆ ಸಮಾರಂಭಗಳ ವಿವರಗಳನ್ನು ಮುಂದಿನ ದಿನಗಳಲ್ಲಿ ಪ್ರಕಟಪಡಿಲಾಗುವುದು. ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭವನ್ನು ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನಾಡಿನೆಲ್ಲೆಡೆ ಆಚರಿಸುತ್ತಿರುವುದು ಸಂತಸ ಮತ್ತು ಹೆಮ್ಮೆಯ ಸಂಗತಿಯಾಗಿದೆ ಎಂದರು. ವೀರಶೈವ ಧರ್ಮದ ಚಾರಿತ್ರಿಕ ಇತಿಹಾಸದಲ್ಲಿಯೇ ಪ್ರಥಮವಾಗಿ ಬಾಳೆಹೊನ್ನೂರು ಧರ್ಮ ಪೀಠದಲ್ಲಿ 51 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯರ ಶಿಲಾಮೂರ್ತಿ ನಿರ್ಮಾಣದ ಸಂಕಲ್ಪದೊಂದಿಗೆ ಕೆಲಸ ಪ್ರಗತಿಯಲ್ಲಿದೆ. ಈ ಸ್ಥಳದಲ್ಲಿ ಉದ್ಯಾನವನ, ಧ್ಯಾನ ಮಂದಿರ, ವೀರಶೈವೇತಿಹಾಸಯುಕ್ತ ವಾಚನಾಲಯ, ಪ್ರಾಚ್ಯವಸ್ತು ಸಂಗ್ರಹಾಲಯ, ಶ್ರೀ ಪೀಠದ ಕುರಿತಾದ ಮಾಹಿತಿ ಹೊತ್ತ ದಾಖಲಾತ್ಮಕ ಸಂಶೋಧನ ಕೇಂದ್ರಗಳನ್ನೊಳಗೊಂಡಂತೆ ಹಲವು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದರು.

ಸಮಾರಂಭದಲ್ಲಿ ಬೇರುಗಂಡಿ ಬೃಹನ್ಮಠದ ರೇಣುಕ ಮಹಂತ ಶಿವಾಚಾರ್ಯ ಸ್ವಾಮಿಗಳು, ಚಿಕ್ಕಮಗಳೂರಿನ ಉಪ್ಪಳ್ಳಿ ಬಸವರಾಜ್, ದೇವರಾಜ್, ತರೀಕೆರೆ ಗ್ಯಾಸ್ ರಾಜಣ್ಣ, ಯೋಗೀಶ, ಶಿವಮೊಗ್ಗದ ಓಂಕಾರಪ್ಪ, ನ್ಯಾಮತಿ ಬಸವರಾಜ್, ನೆರಳೆಕೆರೆ ಬಿ.ಶಿವಮೂರ್ತಿ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

### ಪ್ರಜ್ವಲ ರೇವಣ್ಣ ಭೇಟಿ

ಹಾಸನ ಲೋಕಸಭಾ ಸದಸ್ಯ ಪ್ರಜ್ವಲ ರೇವಣ್ಣ ಜಗದ್ಗುರು ರಂಭಾಪುರಿ ಪೀಠಕ್ಕೆ ಆಗಮಿಸಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದರು. ನಂತರ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

## ರಾಜ್ಯ ಮಟ್ಟದ ಬಂಜಾರ ಬಹುಮುಖಿ ಪ್ರತಿಭಾನ್ವೇಷಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ವತಿಯಿಂದ ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲೂಕು ಸೂರಗೊಂಡನಕೊಪ್ಪದ ಭಾಯಾಗಡದಲ್ಲಿ 2023–2024ನೇ ಸಾಲಿನ ರಾಜ್ಯ ಮಟ್ಟದ ಬಂಜಾರ ಬಹುಮುಖಿ ಪ್ರತಿಭಾನ್ವೇಷಣೆ–ಕಲಾಮಳಾವೋ ಕಾರ್ಯಕ್ರಮದಲ್ಲಿ ಗದಗ ತಾಲೂಕಿನ ನಾಗಾವಿ ತಾಂಡದ ಲಂಬಾಣಿ ಮಹಿಳೆಯರಿಂದ ಜರುಗಿದ ಲಂಬಾಣಿ ನೃತ್ಯಕ್ಕೆ ರಾಜ್ಯಮಟ್ಟದ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಈ ಮಹಿಳಾ ತಂಡಕ್ಕೆ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಎಲ್. ಶಿವಶಂಕರ ನಾಯಕ ಅವರು ಪ್ರಶಸ್ತಿಪತ್ರ ನೀಡಿ ಸನ್ಮಾನಿಸಿ ಮಾತನಾಡಿ, ನಮ್ಮ ಲಂಬಾಣಿ ಸಂಸ್ಕೃತಿಯನ್ನು ಉಳಿಸಿ–ಬೆಳೆಸಿಕೊಂಡು ಹೋಗುವುದು ಅತ್ಯಂತ ಅವಶ್ಯಕವಾಗಿದೆ ಎಂದರಲ್ಲದೆ, ಅತ್ಯುತ್ತಮ ಲಂಬಾಣಿ ನೃತ್ಯ ಪ್ರದರ್ಶನ ನೀಡಿದ ತಂಡಕ್ಕೆ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಲಂಬಾಣಿ ನೃತ್ಯದಲ್ಲಿ ಸಾವಿತ್ರಿಬಾಯಿ ರಮೇಶ ಮಾಳಗಿಮನಿ, ಮೀರಾಬಾಯಿ ಲಮಾಣಿ, ಶಾಂತವ್ವ ಪೂಜಾರ, ಕಮಲವ್ವ ಪೂಜಾರ, ಗೌರವ್ವ ಪವಾರ, ಶಂಕ್ರವ್ವ ಲಮಾಣಿ, ಹೇಮವ್ವ ಲಮಾಣಿ, ರತ್ನವ್ವ ಪವಾರ ಸನ್ಮಾನಿತಗೊಂಡರು.

## ನಾಗಾವಿ ತಾಂಡದ ಭಜನಾ ಸಂಘ ರಾಜ್ಯಕ್ಕೆ ಪ್ರಥಮ



■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆಯ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ವತಿಯಿಂದ ಇತ್ತೀಚೆಗೆ ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲೂಕು ಸೂರಗೊಂಡನಕೊಪ್ಪದ ಭಾಯಾಗಡದಲ್ಲಿ ಜರುಗಿದ 2023–2024ನೇ ಸಾಲಿನ ರಾಜ್ಯ ಮಟ್ಟದ ಬಂಜಾರ ಬಹುಮುಖಿ ಪ್ರತಿಭಾನ್ವೇಷಣೆ–ಕಲಾಮಳಾವೋ ಕಾರ್ಯಕ್ರಮದಲ್ಲಿ ಗದಗ ತಾಲೂಕಿನ ನಾಗಾವಿ ತಾಂಡದ ಬಂಜಾರಾ ಶ್ರೀ ಸಂತ ಸೇವಾಲಾಲ ಭಜನಾ ಸಂಘದವರು ಭಾಗವಹಿಸಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಎಲ್. ಶಿವಶಂಕರ ನಾಯಕ ಮಾತನಾಡಿ, ಸರ್ಕಾರದಿಂದ ಜರುಗುವ ರಾಜ್ಯ ಮತ್ತು ಜಿಲ್ಲಾ ಮಟ್ಟದ ಕಾರ್ಯಕ್ರಮಗಳಲ್ಲಿ ಕರ್ನಾಟಕ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿವಿಧ ಕಾರ್ಯಕ್ರಮಗಳಲ್ಲಿ ಈ ಭಜನಾ ಕಲಾ ತಂಡವು ಪ್ರಶಸ್ತಿ ಪಡೆದಿರುವುದು ಗದಗ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಭಜನಾ ಸಂಘದ ತಂಡದ ಮುಖ್ಯಸ್ಥರಾದ ನೇಮಪ್ಪ ಪಾಂಡಪ್ಪ ಲಮಾಣಿ, ರೂಪಸಿಂಗ್ ಪೂಜಾರ, ತಿಪ್ಪಣ್ಣ ಪವಾರ, ರಮೇಶ ಮಾಳಗಿಮನಿ, ಲಕ್ಷ್ಮಣ ಪವಾರ, ಪವನ ಪೂಜಾರ, ಜಂಬಪ್ಪ ಪವಾರ, ಖುಷಿ ಪವಾರ, ದಿವ್ಯಾ ಪವಾರ ಅವರನ್ನು ಸನ್ಮಾನಿಸಲಾಯಿತು.

## ಶ್ರೀ ದತ್ತಾತ್ರೇಯನಿಗೆ ಕ್ಷೀರಾಭಿಷೇಕ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಜಗತ್ತಿನಲ್ಲಿರುವ ಅನೇಕ ದೇವರುಗಳು ಒಂದೊಂದು ಬಗೆಯ ಪ್ರಿಯರಾಗಿದ್ದಾರೆ. ಅಲಂಕಾರ ಪ್ರಿಯ ವಿಷ್ಣುವಾದರೆ, ಅಭಿಷೇಕ ಪ್ರಿಯ ಶಂಕರ ಎಂಬುದು ಎಲ್ಲರಿಗೂ ಗೊತ್ತು. ಆದರೆ ಪ್ರತಿ ಭಾರತ ಹುಣ್ಣಿಮೆಯ ದಿನದಂದು ಶ್ರೀ ಗುರು ದತ್ತಾತ್ರೇಯನಿಗೆ ಸಲ್ಲಿಕೆಯಾಗುವ ಕ್ಷೀರಾಭಿಷೇಕ ಅತ್ಯಂತ ಶ್ರೇಷ್ಠವಾದುದು ಎಂದು ಶ್ರೀ ದತ್ತಾತ್ರೇಯ ದೇವಸ್ಥಾನದ ಅರ್ಚಕ ಶ್ರೀವಲ್ಲಭಶಾಸ್ತ್ರೀ ಸದರಜೋಷಿ ಹೇಳಿದರು.

ಪಟ್ಟಣದ ದತ್ತಾತ್ರೇಯ ದೇವಸ್ಥಾನದಲ್ಲಿ 114ನೇ ಗುರುಪ್ರತಿಪದೆ ಉತ್ಸವದ ನಿಮಿತ್ತ ಶನಿವಾರ ಶ್ರೀ ಗುರು ದತ್ತಾತ್ರೇಯನಿಗೆ ಕ್ಷೀರಾಭಿಷೇಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.


ಭಾರತದಲ್ಲಿ ಗೋವುಗಳನ್ನು ದೇವತೆಯೆಂದು ಪೂಜಿಸುತ್ತಾರೆ. ಬಾಲವೃದ್ಧರಾಗಿ ಎಲ್ಲರಿಗೂ ಕ್ಷೀರ ಅತ್ಯಂತ ಪ್ರಿಯವಾಗಿದ್ದು, ಭಗವಂತನಿಗೂ ಸಹ ಗೋ ಕ್ಷೀರ ಅತ್ಯಂತ ಪ್ರಿಯವಾಗಿದೆ ಎಂದು ಸದರಜೋಷಿ ಹೇಳಿದರು.

ದತ್ತಾತ್ರೇಯನಲ್ಲಿ ಬ್ರಹ್ಮ, ವಿಷ್ಣು ಮತ್ತು ಮಹೇಶ್ವರರು ಅವತರಿಸಿದ್ದಾರೆ. ಕ್ಷೀರಾಭಿಷೇಕದಿಂದ ಭಗವಂತ ಸಂಪ್ರೀತನಾಗುತ್ತಾನೆ. ಭಕ್ತರ ಇಷ್ಟಾರ್ಥಗಳನ್ನು ಈಡೇರುವಂತೆ ಹರಸುತ್ತಾನೆ. ಅರುಣ ಜಿ.ಕುಲಕರ್ಣಿ(ಕುರಗಡ್ಡಿ) ಅವರು ಸತತ 34 ವರ್ಷಗಳಿಂದ ಶ್ರೀ ದತ್ತಾತ್ರೇಯರಿಗೆ ಕ್ಷೀರಾಭಿಷೇಕ ಸೇವೆಯನ್ನು ಅರ್ಪಿಸುತ್ತಿದ್ದಾರೆ. ನಿಜಕ್ಕೂ ಅವರು, ಅವರ ಕುಟುಂಬದವರು ಪುಣ್ಯ ಪ್ರಾಪ್ತಿಗೆ ಪಾತ್ರರಾಗಿದ್ದಾರೆ ಎಂದರು.

ವೇ.ಮೂ. ವಿಶ್ವನಾಥಭಟ್ಟ ವೈದ್ಯ, ಎಸ್.ಎಚ್. ಕುಲಕರ್ಣಿ, ಎ.ಜಿ. ಕುಲಕರ್ಣಿ, ಅರುಣ ಕುಲಕರ್ಣಿ, ರಾಮಚಂದ್ರ ಕುಲಕರ್ಣಿ, ಡಾ. ಕೃಷ್ಣಾ ಕಾಳೆ, ಆದರ್ಶ ಕುಲಕರ್ಣಿ, ಅಜಿತ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ಹರೀಶ ಕುಲಕರ್ಣಿ, ಆನಂದ ಕುಲಕರ್ಣಿ, ವಸಂತ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ನಾಗರಾಜ ನಾಡಗೇರ, ವಿ.ಆರ್. ಗ್ರಾಮಪುರೋಹಿತ, ಶ್ರೀಧರ ಗ್ರಾಮಪುರೋಹಿತ, ಆನಂದ ಕಾಳೆ, ಬಾಬುರಾವ ಕಾಳೆ, ಮುಕುಂದ ಸೂರಭಟ್ಟನವರ, ರಾಮಕೃಷ್ಣ ಸದರಜೋಶಿ, ಪ್ರಕಾಶ ಕಾಳೆ, ಸೇರಿದಂತೆ ಇತರರಿದ್ದರು.

# ನಾಟಕ ಪ್ರಾರಂಭೋತ್ಸವ, ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ತಾಲೂಕಿನ ಮುಳಗುಂದ ಪಟ್ಟಣದ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜಾತ್ರಾ ಮಹೋತ್ಸವದ ಅಂಗವಾಗಿ ಗದುಗಿನ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂ.ಪಂಚಾಕ್ಷರ ಗವಾಯಿಗಳವರ ನಾಟ್ಯ ಸಂಘ ನಾಟಕ ಪ್ರಾರಂಭೋತ್ಸವ ಸಮಾರಂಭದಲ್ಲಿ ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತರಾದ ಸಿದ್ದೇಶ್ವರ ಶಾಸ್ತ್ರೀಗಳು ತೆಲ್ಲೂರ ಅವರನ್ನು ಸನ್ಮಾನಿಸಲಾಯಿತು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಧಾರವಾಡ ಮುರುಘಾಮಠ ಹಾಗೂ ಮುಳಗುಂದ ಗವಿಮಠದ ಪೂಜ್ಯ ಮಲ್ಲಿಕಾರ್ಜುನ ಮಹಾಸ್ವಾಮಿಗಳು ತೆಲ್ಲೂರರನ್ನು ಸನ್ಮಾನಿಸಿ ಗೌರವಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ತೆಲ್ಲೂರ ಶಾಸ್ತ್ರೀಗಳು, ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂ.ಪಂಚಾಕ್ಷರ ಗವಾಯಿಗಳವರ ನಾಟ್ಯ ಸಂಘ ನಾಡಿನಾದ್ಯಂತ ಸಂಚರಿಸಿ ರಂಗಕಲೆಯನ್ನು ಉಳಿಸಿ ಬೆಳೆಸುವ ಕಾರ್ಯ ಮಾಡುತ್ತಿದೆ. ಇಂದಿನ ಆಧುನಿಕ ದಿನಗಳಲ್ಲಿಯೂ ಜನರಲ್ಲಿ ನಾಟಕ ಅಭಿರುಚಿಯನ್ನು ಹೆಚ್ಚಿಸುವಲ್ಲಿ ಈ ನಾಟ್ಯ ಸಂಘ ಕ್ರಿಯಾಶೀಲತೆಯಿಂದ ಕೆಲಸ ಮಾಡುತ್ತಿದೆ ಎಂದರು.

ಮುಖ್ಯ ಅತಿಥಿಗಳಾಗಿ ಗಣ್ಯರಾದ ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಶಿವಪ್ರಕಾಶ ಮಹಾಜನಶೆಟ್ರ, ಮಹೇಶ ಬಡ್ನಿ, ಡಾ. ಎಸ್.ಸಿ. ಚವಡಿ, ರಾಜಣ್ಣ ಜೇವರ್ಗಿ, ಎಲ್.ಬಿ. ಶೇಖ ಮಾಸ್ತರ ಆಗಮಿಸಿದ್ದರು. ನಾಟಕ ಕಂಪನಿ ವ್ಯವಸ್ಥಾಪಕ ಮಹಾದೇವ ಗುಟ್ಲಿ, ಕಾರ್ಯದರ್ಶಿ ನೂರುದ್ದೀನ್ ವಣಗೇರಿ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವ ಸ್ವಚ್ಛತೆಯ ಬದುಕಿನತ್ತ ನಡೆಯಬೇಕು. ತನ್ನ ಸುತ್ತಲಿನ ಜನರಿಗೆ ಹೊಸದಾಗಿ ಸೃಷ್ಟಿಯಾಗುವ ರೋಗಗಳ ಬಗ್ಗೆ ಜಾಗೃತಿ ಮೂಡಿಸಿಕೊಂಡು ಆರೋಗ್ಯದ ಕಾಳಜಿ ಹೊಂದಬೇಕೆಂದು ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ ಪಾಟೀಲ ನುಡಿದರು.

ಅವರು ಸನ್ಮಾರ್ಗ ಕಾಲೇಜು ಗದಗ, ಜಿಲ್ಲಾ ಪಂಚಾಯತ್ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ‘ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ’ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ತಾಲೂಕಾ ಆರೋಗ್ಯಾಧಿಕಾರಿ ಡಾ. ಚೇತನ್ ಎಚ್.ಎಚ್ ಮಾತನಾಡಿ, ಜಂತು ಹುಳು ಮಾನವನನ್ನು ರಕ್ತಹೀನನ್ನಾಗಿಸುವದಲ್ಲದೇ ಮಾನವನ ದೇಹದ ಮೇಲೆ ಅನೇಕ ರೀತಿಯಲ್ಲಿ ವ್ಯತಿರಿಕ್ತ ಪರಿಣಾಮ ಬೀರುವುದೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ಜಂತುಹುಳು ರೋಗದ ಬಗ್ಗೆ ವಿದ್ಯಾರ್ಥಿಗಳು ಜಾಗೃತರಾಗಬೇಕು. ಅದು ಬರದಂತೆ ವಾತಾವರಣವನ್ನು ನಿರ್ಮಿಸಿಕೊಳ್ಳಬೇಕೆಂದರು.

ವೇದಿಕೆಯ ಮೇಲೆ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಸದಸ್ಯರು, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಆರೋಗ್ಯ ಇಲಾಖೆಯ ಡಾ. ಮಹೇಶ ಕೊಪ್ಪಳ, ಗೀತಾ ಎನ್.ಕಾಂಬಳೆ, ಶ್ರೀಮತಿ ಉಮಚಗಿ, ಪ್ರವೀಣ ಮಾನ್ವಿ, ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಪ್ರೊ. ಎಚ್.ಎಸ್. ದಳವಾಯಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಗದಗ ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ ಗೀತಾ ಎನ್.ಕಾಂಬಳೆ ವಂದಿಸಿದರು.

# ಗ್ರಾಹಕರ ಕ್ಲಬ್ ಮಕ್ಕಳ ಜೀವನಕ್ಕೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಶಾಲೆ, ಕಾಲೇಜುಗಳಲ್ಲಿ ಗ್ರಾಹಕರ ಕ್ಲಬ್ ರಚಿಸುವುದರಿಂದ ಮಕ್ಕಳ ಭಾವೀ ಜೀವನಕ್ಕೆ ಸಹಕಾರಿಯಾಗುವುದು ಎಂದು ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ಗೋಲಪ್ಪನವರ ಹೇಳಿದರು.

ಅವರು ಸಮೀಪದ ನಾಗಾವಿ ಗ್ರಾಮದ ದಿ.ವಿರುಪಾಕ್ಷಪ್ಪ ಸೋಮಪ್ಪ ಚಿಂಚಲಿ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯಲ್ಲಿ 2023/24ನೇ ಸಾಲಿನ ಗ್ರಾಹಕರ ಕ್ಲಬ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳು ನಿತ್ಯ ಜೀವನದಲ್ಲಿ ವಿದ್ಯುತ್, ನೀರು, ಗ್ಯಾಸ್, ಆಹಾರ ಪದಾರ್ಥ, ಔಷಧಿ, ತರಕಾರಿ ಇನ್ನಿತರ ವಸ್ತುಗಳ ಖರೀದಿ ಸಂದರ್ಭದಲ್ಲಿ ಕೆಲಸ–ಕಾರ್ಯಗಳಿಗೆ ತೆರಳಿದಾಗ ಮೋಸ, ವಂಚನೆ ಒಳಗಾಗುವ ಸಾಧ್ಯತೆ ಇರುತ್ತದೆದಿದರಿಂದ ಪಾರಾಗುವ ಕಾಯ್ದೆಗಳ ಬಗ್ಗೆ ಗ್ರಾಹಕರ ಕ್ಲಬ್ ತಿಳಿಸಿಕೊಡುತ್ತದೆ. ಆದುದರಿಂದ ಗ್ರಾಹಕರ ಕ್ಲಬ್ ತುಂಬಾ ಅವಶ್ಯಕವಾಗಿದೆ ಎಂದರು.

ಗದಗ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯ ಯಶೋಧಾ ಪಾಟೀಲ ಮಾತನಾಡಿ, ಗ್ರಾಹಕರಿಗಾಗುವ ವಂಚನೆ, ಮೋಸ ಪರಿಹರಿಸಲೆಂದೇ ಗ್ರಾಹಕರ ಸಂರಕ್ಷಣಾ ಕಾಯ್ದೆ ಜಾರಿಯಲ್ಲಿದ್ದು, ಮಕ್ಕಳು ಖರೀದಿಯ ಸಂದರ್ಭದಲ್ಲಿ ಎಚ್ಚರ ವಹಿಸಬೇಕು ಎಂದರು.

ಶಾಲಾ ಪ್ರಧಾನ ಗುರು ಜಯಶ್ರೀ ಏಕಬೋಟೆ, ಯಶೋಧಾ ಪಾಟೀಲ್, ರಾಜು ಖೇತ್ರಿ, ಜೆ.ಎಂ. ಮುತ್ತಿನಪೆಂಡಿಮಠ, ಎ.ಎ. ಬಂಡಿವಾಡಮಠ, ವಿ.ಎಂ. ಖ್ಯಾಡದ, ಎಂ.ಎಂ. ಬಾಗಲಿ, ಶಾಲಾ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಇದ್ದರು.

## ಸರ್ವಧರ್ಮ ಸಾಮೂಹಿಕ ವಿವಾಹ ನಾಳೆ

■ವಿಜಯಸಾಕ್ಷಿ ಸುದ್ದಿ, ರೋಣ

ಹಜರತ್ ಮಹ್ಮದ ಪೈಗಂಬರವರ ಜನ್ಮ ದಿನದ ನಿಮಿತ್ತ ಪಟ್ಟಣದ ಅಝಾದ ಯುವಕ ಸಂಘ ಹಾಗೂ ತಲಾಬಕಟ್ಟಾ ಮಕಾನ ಕಮಿಟಿ ಇವರುಗಳ ಆಶ್ರಯದಲ್ಲಿ ಫೆ.26ರಂದು ಹೊಸ ಸಂತೆ ಬಝಾರದ ಆವರಣದಲ್ಲಿ ಸರ್ವಧರ್ಮ ಸಾಮೂಹಿಕ ವಿವಾಹಗಳು ಜರುಗಲಿವೆ.

ಸಾನ್ನಿಧ್ಯವನ್ನು ಗುಲಗಂಜಿಮಠದ ಗುರುಪಾದ ದೇವರು, ಅಭಿನವ ಬೂದೇಶ್ವರ ಶ್ರೀಗಳು, ನೇತೃತ್ವವನ್ನು ಹಜರತ್ ಸುಲೇಮಾನ್ ಶಾವಲಿ ದರ್ಗಾದ ಅಜ್ಜನವರು ವಹಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲರು ವಹಿಸಲಿದ್ದಾರೆ ಎಂದು ಸಮಿತಿ ಪ್ರಕಟನೆಯಲ್ಲಿ ತಿಳಿಸಿದೆ.

## ನೇರ ಪ್ರಸಾರದ ವ್ಯವಸ್ಥೆ


■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರು ಅರಮನೆಯ ಮೈದಾನದಲ್ಲಿ ಫೆ.24 ಮತ್ತು 25ರಂದು ನಡೆಯುವ ಸಂವಿಧಾನ ಜಾಗೃತಿ ಜಾಥಾ ನಿಮಿತ್ಯ ನಡೆಯುವ ಕಾರ್ಯಕ್ರಮಗಳ ನೇರ ಪ್ರಸಾರವನ್ನು ದೊಡ್ಡ ಪರದೆಯ ಮೇಲೆ ವೀಕ್ಷಿಸಲು ಸಾರ್ವಜನಿಕರಿಗೆ ಮತ್ತು ಎಲ್ಲ ಸಮುದಾಯದ ಮುಖಂಡರುಗಳಿಗೆ ಅನುಕೂಲವಾಗುವಂತೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ವ್ಯವಸ್ಥೆ ಮಾಡಲಾಗಿದೆ.

ಸಾರ್ವಜನಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ಎಂ.ವರಗಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಿಧನ ವಾರ್ತೆ

**ಸೋಮಶೇಖರಪ್ಪ ಪರಪ್ಪ ಹೆಬ್ಬಾಳ**



ಲಕ್ಷ್ಮೇಶ್ವರ, ಪಟ್ಟಣದ ಸೊಪ್ಪಿನಕೆರೆ ಓಣಿಯ ಹಿರಿಯರಾದ ಸೋಮಶೇಖರಪ್ಪ ಪರಪ್ಪ ಹೆಬ್ಬಾಳ (81) ಶನಿವಾರ ನಿಧನ ಹೊಂದಿದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿ ಪಾರಬಂಧು–ಬಳಗವಿದೆ.

## ಶ್ರೀ ಮೃತ್ಯುಂಜಯ ಅಪ್ಪನವರ ಸ್ಮರಣೋತ್ಸವ




**■ವಿಜಯಸಾಕ್ಷಿ ಸುದ್ದಿ, ಗದಗ**

ಮಣಕವಾಡದ ಮಹಿಮಾ ಪುರುಷ ಶ್ರೀ ಗುರು ಮೃತ್ಯುಂಜಯ ಮಹಾಸ್ವಾಮಿಗಳ ಸ್ಮರಣೋತ್ಸವ ಮಾಲಿಕೆ-125 ಕಾರ್ಯಕ್ರಮ ಫೆ.25ರ ಮುಂಜಾನೆ 11 ಗಂಟೆಗೆ ನಗರದ ಲಖಾನಿ ಆಸ್ಪತ್ರೆ ಎದುರಿಗಿನ ಶ್ರೀ ಗುರುಮೃತ್ಯುಂಜಯ ಗುರುಕುಲ ಆಶ್ರಮದ ಸಭಾಭವನದಲ್ಲಿ ಜರುಗಲಿದೆ. ಹಿರಿಯ ಸಾಹಿತಿಗಳಾದ ಐ.ಕೆ. ಕಮ್ಮಾರ ಸಮಾರಂಭದ ಅಧ್ಯಕ್ಷತೆ ವಹಿಸುವರು.

ಹಿರಿಯ ಸಾಹಿತಿಗಳಾದ ಬಸವರಾಜ ಗಣಪ್ಪನವರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಭಕ್ತಿ ಸೇವೆಯನ್ನು ಎಚ್.ಎನ್. ಕುರಿ ವಹಿಸುವರು. ಈ ಕಾರ್ಯಕ್ರಮದಲ್ಲಿ ಶಿವಶಂಕ್ರಪ್ಪ ಆರಟ್ಟಿ, ಡಿ.ಜಿ. ಪಾಟೀಲ, ಶಿವಣ್ಣ ಒಡೆಯರ, ಕೆ.ಬಿ. ಮರಡ್ಡಿ ಗುರುಗಳು, ಮೃತ್ಯುಂಜಯ ಹಟ್ಟಿ ಮುಂತಾದವರು ಪಾಲ್ಗೊಳ್ಳುವರು.

ಈ ಪುಣ್ಯ ಕಾರ್ಯದಲ್ಲಿ ಪಾಲ್ಗೊಂಡು ಪೂಜ್ಯ ಮೃತ್ಯುಂಜಯ ಅಪ್ಪನ ಕೃಪೆಗೆ ಪಾತ್ರರಾಗಲು ಆಶ್ರಮದ ವಿದ್ಯಾರ್ಥಿಗಳಾದ ಆಲಮ್, ಅಸ್ಲಂ, ಅಕ್ರಮ್, ಸ್ನೇಹಾ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ನಿರ್ವಹಣಾ ಕಾರ್ಯ ಮುಂದೂಡಿಕೆ

**■ವಿಜಯಸಾಕ್ಷಿ ಸುದ್ದಿ, ಗದಗ**


110 ಕೆವ್ಹಿ ಬೆಟಗೇರಿ/110 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಫೆ.25ರಂದು ನಡೆಯಬೇಕಿದ್ದ ಪರಿವರ್ತಕ-1ರ ತೈಲ ಸೋರುವಿಕೆ ತಡೆಯುವ ನಿರ್ವಹಣಾ ಕೆಲಸವನ್ನು 2022-23ನೇ ಸಾಲಿನ ಪೊಲೀಸ್ ಕಾನ್ಸ್‌ಟೇಬಲ್(ಸಿವಿಲ್) ಲಿಖಿತ ಪರೀಕ್ಷೆಯ ಕಾರಣದಿಂದ ಮುಂದೂಡಲಾಗಿದೆ.

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಪರಿವರ್ತಕ-1ರ ತೈಲ ಸೋರುವಿಕೆ ತಡೆಯುವ ನಿರ್ವಹಣಾ ಕೆಲಸ ಮುಂದೂಡಲಾಗಿದ್ದರಿಂದ ಫೆ.25ರಂದು ನಿಗದಿತ ವೇಳಾಪಟ್ಟಿಯಂತೆ ವಿದ್ಯುತ್ ಸರಬರಾಜು ಇರುತ್ತದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಬನಶಂಕರಿ ದೇವಿ ರಥೋತ್ಸವ । ಧರ್ಮಸಭೆಯಲ್ಲಿ ಹೂವಿನಶಿಗ್ಲಿಯ ಚನ್ನವೀರ ಶ್ರೀಗಳ ಆಶೀರ್ವಚನ

# ಗುರು-ಹಿರಿಯರಿಗೆ ವಿಧೇಯರಾಗಿರಿ







**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಕೆಂಚಲಾಪೂರ ಓಣಿಯಲ್ಲಿನ ಬನಶಂಕರಿ ದೇವಿ ದೇವಸ್ಥಾನದ ಜಾತ್ರಾಮಹೋತ್ಸವದ ಅಂಗವಾಗಿ ಜರುಗಿದ ನೂತನ ರಥೋತ್ಸವವನ್ನು ಶನಿವಾರ ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ನೆರವೇರಿಸಿದರು.

ಬಳಿಕ ಧರ್ಮಸಭೆಯನ್ನುದ್ದೇಶಿಸಿ ಆಶೀರ್ವಚನ ನೀಡಿದ ಶ್ರೀಗಳು, ಜಾತ್ರೆ-ಧಾರ್ಮಿಕ ಕಾರ್ಯಕ್ರಮಗಳು, ಹಬ್ಬ-ಹರಿದಿನಗಳು ಪರಸ್ಪರರಲ್ಲಿ ಸ್ನೇಹ, ಸೌಹಾರ್ದತೆ ಬೆಸೆಯುವ ಜತೆಗೆ ಸಾತ್ವಿಕ ಸಮಾಜ ನಿರ್ಮಾಣಕ್ಕೆ ಕಾರಣವಾಗುತ್ತವೆ. ಹಿರಿಯರ ಕಾಲದಿಂದಲೂ ಅರ್ಥಪೂರ್ಣವಾಗಿ ನಡೆದುಕೊಂಡು ಬಂದಿರುವ ಸಂಪ್ರದಾಯಗಳು ಮುಂದುವರೆಯಬೇಕು. ಜನರಿಗೆ ಶಾಂತಿ-ನೆಮ್ಮದಿ ಕರುಣಿಸುವ, ಸನ್ಮಾರ್ಗ ತೋರುವ ದೇವಸ್ಥಾನಗಳಲ್ಲಿ ನಿತ್ಯ ಪೂಜಾ ಕೈಂಕರ್ಯಗಳು ನಡೆಯಬೇಕು. ಯುವಕರು ದುಶ್ಚಟಗಳಿಂದ ದೂರವಿದ್ದು ಸಂಸ್ಕಾರ, ಸಂಸ್ಕೃತಿ, ಗುರು-ಹಿರಿಯರಿಗೆ ವಿಧೇಯರಾಗಿ ನಡೆಯಬೇಕು. ಎಲ್ಲಿ ಸ್ತ್ರೀಯರು ಗೌರವಿಸಲ್ಪಡುತ್ತಾರೋ ಅಲ್ಲಿ ದೇವತೆಗಳು ನೆಲೆಸುತ್ತಾರೆ. ಹೀಗಾಗಿ, ಮಹಿಳೆಯರನ್ನು ಪೂಜ್ಯನೀಯ ಭಾವನೆಯಿಂದ ಕಾಣಬೇಕು ಎಂದು ಹೇಳಿದರು.

5 ವರ್ಷಗಳ ಹಿಂದೆ ಜೀರ್ಣೋದ್ಧಾರಗೊಂಡ ದೇವಸ್ಥಾನಕ್ಕೆ 75 ಲಕ್ಷ ರೂ. ವೆಚ್ಚದಲ್ಲಿ ನೂತನ ರಥ ನಿರ್ಮಾಣಗೊಂಡಿದ್ದು, 3 ದಿನಗಳಿಂದ ಜಾತ್ರಾಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು.

ಈ ವೇಳೆ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಮಹಾಬಳೇಶ್ವರಪ್ಪ ಬೇವಿನಮರದ, ಬನಶಂಕರಿ ಸೇವಾ ಸಮಿತಿ ಅಧ್ಯಕ್ಷ ನಾರಾಯಣಪ್ಪ ಗಾರ್ಗಿ, ಲಕ್ಷ್ಮಣ ಮೆಡ್ಲೇರಿ, ಸುನೀಲ ಮಹಾಂತಶೆಟ್ಟರ, ಈಶ್ವರ ಮೆಡ್ಲೇರಿ, ಗಣೇಶ ಬೇವಿನಮರದ ಸೇರಿ ಹಿರಿಯರು, ಭಕ್ತರು ಇದ್ದರು.

ಗುರುವಾರ ಕಳಸಾರೋಹಣ, ಶುಕ್ರವಾರ ಹೋಮ-ಹವನ, ಪೂಜಾ ಕೈಂಕರ್ಯಗಳು, ಶನಿವಾರ ಶ್ರೀ ದೇವಿಮೂರ್ತಿಗೆ ಅಭಿಷೇಕ, ವಿಶೇಷ ಅಲಂಕಾರ ನೆರವೇರಿತು. ಮಂಜುನಾಥ ಬೇವಿನಮರದ ದಂಪತಿಗಳಿಂದ 1008 ಮಹಿಳೆಯರಿಗೆ ಉಡಿ ತುಂಬುವುದು ಮತ್ತು ಸತ್ಯನಾರಾಯಣ ಪೂಜಾ ಕಾರ್ಯಕ್ರಮ ನಡೆಯಿತು. ಸಂಜೆ ರಥೋತ್ಸವ ಬಳಿಕ ಧರ್ಮಸಭೆ ನಡೆಯಿತು.

## ಬಸವದಳದ ಉಪನ್ಯಾಸ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಬಸವದಳದ 1582ನೇ ಶರಣ ಸಂಗಮದಲ್ಲಿ ಫೆ.25ರ ಬೆಳಿಗ್ಗೆ 11ಕ್ಕೆ ಒಕ್ಕಲಗೇರಿ ಓಣಿಯ ವಿಜಯನಗರ ಹೈಸ್ಕೂಲ್ ಹತ್ತಿರದ ಪ್ರೊ. ಶಿವಾನಂದ ಪಿ.ಹೊಂಬಳ ಇವರ ನಿವಾಸದಲ್ಲಿ ಗುರು ಪ್ರವೇಶ ಹಾಗೂ ನಿಜಾಚರಣೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವ ದಳದ ಶರಣ ಎಸ್.ಎನ್. ಹಕಾರಿ ಇವರು ವಹಿಸುವರು. ಉಪನ್ಯಾಸವನ್ನು ಶರಣತತ್ವ ಚಿಂತಕ, ಶರಣ ಅಶೋಕ ಬರಗುಂಡಿ ಇವರು ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಪವಿತ್ರ ಉಮ್ರಾ ಯಾತ್ರಾರ್ಥಿಗಳಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪವಿತ್ರ ಉಮ್ರಾ ಯಾತ್ರೆ ಕೈಗೊಳ್ಳುತ್ತಿರುವ ಸಮೀಪದ ಕುರಡಗಿ ಗ್ರಾಮದ ನಿವಾಸಿಗಳಾದ ಹಫೀಜ್ ನಬೀಸಾಬ ನದಾಫ್, ಮೌಲಾಸಾಬ ಲಕ್ಕಲಕಟ್ಟಿ ಹಾಗೂ ಇವರ ಪತ್ನಿ ಮುಮ್ತಾಜ್‌ಬೀ ಲಕ್ಕಲಕಟ್ಟಿ ಅವರನ್ನು ಅಂಜುಮನ್ ಇಸ್ಲಾಂ ಕಮಿಟಿ ವತಿಯಿಂದ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಹಫೀಜ್ ನದಾಫ್, ವರ್ಷದ ಯಾವುದಾದರೂ ವೇಳೆಯಲ್ಲಿ ಕನಿಷ್ಠ 15 ದಿನ ಯಾತ್ರೆಗೆ ತೆರಳುವುದಕ್ಕೆ ಉಮ್ರಾ ಎನ್ನುತ್ತಾರೆ. ಯಾತ್ರೆಗೆ ಹೋಗುವುದು, ಮಕ್ಕಾ-ಮದೀನಾ ದರ್ಶನ ಮಾಡುವುದು ಜೀವನದ ಪರಮಗುರಿ. ಅಲ್ಲಾಹನ ಇಚ್ಛೆ ಇದ್ದರೆ ಮಾತ್ರ ಈ ಯಾತ್ರೆ ಸಾಧ್ಯವಾಗುತ್ತದೆ. ಈ ಅವಕಾಶ ನನಗೆ ದೊರೆತಿರುವುದು ಸಂತಸ ತಂದಿದೆ ಎಂದರು.

ಮೌಲಾಸಾಬ ಲಕ್ಕಲಕಟ್ಟಿ ಮಾತನಾಡಿ, ನೀವು ಎಲ್ಲರೂ ಸೇರಿ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡುತ್ತಿರುವುದು ನನ್ನ ಹೃದಯ ತುಂಬಿ ಬಂದಿದೆ. ನಿಮಗೆಲ್ಲರಿಗೂ ಒಳ್ಳೆಯದಾಗಲಿ ಎಂದು ಅಲ್ಲಾನಲ್ಲಿ ಪ್ರಾರ್ಥಿಸುತ್ತೇನೆ ಎಂದು ತಿಳಿಸಿದರು.

ಗ್ರಾ.ಪಂ ಸದಸ್ಯ ಶೌಕತಅಲಿ ನದಾಫ್ ಮಾತನಾಡಿ, ಮುಸ್ಲಿಂ ಸಮುದಾಯದಲ್ಲಿ ಹಜ್ ಮತ್ತು ಪವಿತ್ರ ಸ್ಥಳಗಳಲ್ಲಿ ಒಂದಾದ ಉಮ್ರಾ ಧಾರ್ಮಿಕ ಯಾತ್ರೆಗೆ ವಿಶೇಷ ಮಹತ್ವವಿದೆ. ನಿಮ್ಮ ಯಾತ್ರೆಯು ಸುಖಮಯವಾಗಿರಲಿ ಎಂದು ಶುಭ ಹಾರೈಸಿದರು.

ಹುಚ್ಚುಸಾಬ ಗೋಗೇರಿ, ಶೌಕತ್‌ಅಲಿ ನರೇಗಲ್ಲ, ಮಹಮ್ಮದಲಿ ಲಕ್ಕಲಕಟ್ಟಿ, ರಮ್ಜಾನಸಾಬ ನದಾಫ್, ಫಜಲ್‌ಖಾನ ನದಾಫ್, ಮಹಮ್ಮದ್‌ರಫಿ ನದಾಫ್, ಅಕ್ಬರ್‌ಭಾಷಾ ನದಾಫ್, ಸೇರಿದಂತೆ ಇನ್ನಿತರರು ಇದ್ದರು.

### ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ 'ಫ್ರೆಶರ್ಸ್ ಡೇ' ಕಾರ್ಯಕ್ರಮ

# ಪ್ಯಾರಾ ಮೆಡಿಕಲ್‌ನಲ್ಲಿ ಉದ್ಯೋಗಾವಕಾಶ ಹೆಚ್ಚು



**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿಯೊಬ್ಬ ವಿದ್ಯಾರ್ಥಿ ಅಥವಾ ವ್ಯಕ್ತಿ ತಾನಂದುಕೊಂಡ ಕ್ಷೇತ್ರದಲ್ಲಿ ಸಾಧನೆ ಮಾಡಲು ಹಂಬಲಿಸುತ್ತಾನೆ. ಆದರೆ, ಆ ಗುರಿ ಸಾಧನೆಗೆ ಶಿಸ್ತು ಮೊದಲ ಮೆಟ್ಟಿಲಾದರೆ, ಶ್ರದ್ಧೆ, ಪ್ರಾಮಾಣಿಕತೆ ಮತ್ತು ಪರಿಶ್ರಮ ಮುಂದಿನ ಮೆಟ್ಟಿಲುಗಳು. ಪ್ಯಾರಾ ಮೆಡಿಕಲ್ ಓದಿದವರಿಗೆ ಉದ್ಯೋಗವಕಾಶಗಳು ಹೆಚ್ಚು ಎಂದು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಜಿಮ್ಸ್)ಯ ಪ್ರಾಚಾರ್ಯ ಡಾ. ರಾಜು ಜಿ.ಎಂ. ಹೇಳಿದರು.

ಅವರು ಇಲ್ಲಿನ ಜನ ಸೇವಾ ಸಮಿತಿಯ ಶ್ರೀ ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ 2023-24ನೇ ಸಾಲಿಗೆ ಪ್ರವೇಶ ಪಡೆದ ಮೊದಲ ವರ್ಷದ ವಿದ್ಯಾರ್ಥಿಗಳಿಗೆ 'ಗುರಮ್ಮ ಕಾಲೇಜ್ ಆಫ್ ನರ್ಸಿಂಗ್'ದ ಸಭಾಭವನದಲ್ಲಿ ಶನಿವಾರ ಆಯೋಜಿಸಿದ್ದ 'ಫ್ರೆಶರ್ಸ್ ಡೇ' (ಸ್ವಾಗತ ಸಮಾರಂಭ) ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ವೈದ್ಯಕೀಯ ಕ್ಷೇತ್ರದಲ್ಲಿ ವೈದ್ಯರಿಗೆ ಇರುವಷ್ಟೇ ಮಹತ್ವ ನರ್ಸಿಂಗ್ ಸೇರಿ ಪ್ಯಾರಾ ಮೆಡಿಕಲ್ ಕೋರ್ಸ್ ಮುಗಿಸಿದವರಿಗೆ ಇದೆ. ಅನಾರೋಗ್ಯಕ್ಕೀಡಾದ ಸಂದರ್ಭದಲ್ಲಿ ಕಾಯಿಲೆ ಪತ್ತೆ ಸಮರ್ಪಕವಾಗಿರದಿದ್ದರೆ ಚಿಕಿತ್ಸೆ ಕಷ್ಟ. ಆ ಕಾಯಿಲೆ ಪತ್ತೆ ಮಾಡುವವರೇ ಈ ಪ್ಯಾರಾ ಮೆಡಿಕಲ್ ಓದಿದವರು ಎಂದು ಬಣ್ಣಿಸಿ, ವಿದ್ಯಾರ್ಥಿಗಳು ಶ್ರದ್ಧೆಯಿಂದ ಓದಿ, ಪಾಲಕರು ಹಾಗೂ ಓದಿದ ಸಂಸ್ಥೆಗೆ ಕೀರ್ತಿ ತರಬೇಕು ಎಂದು ಕಿವಿಮಾತು ಹೇಳಿದರು.

ಕಿತ್ತೂರ ಕರ್ನಾಟಕ ದಿನಪತ್ರಿಕೆ ಸಂಪಾದಕ ಮಂಜುನಾಥ ಬಸಪ್ಪ ಅಬ್ಬಿಗೇರಿ ಮಾತನಾಡಿ, ವೈದ್ಯಕೀಯ ಕ್ಷೇತ್ರದಲ್ಲಿ ಪ್ಯಾರಾ ಮೆಡಿಕಲ್ ಸೇವೆಗೆ ಹೆಚ್ಚು ಮಹತ್ವ ಇದೆ. ಅನಾರೋಗ್ಯಕ್ಕೀಡಾದಾಗ ಅದನ್ನು ಮೊದಲ ಹಂತದಲ್ಲಿ ವಿವಿಧ ಪರೀಕ್ಷೆಗಳ ಮೂಲಕ ಪತ್ತೆ ಮಾಡುವುವವರೇ ಈ ಪ್ಯಾರಾ ಮೆಡಿಕಲ್ ಓದಿದ ವಿದ್ಯಾರ್ಥಿಗಳು. ಹೀಗಾಗಿ ನರ್ಸಿಂಗ್ ಸೇವೆ ದೊಡ್ಡದು ಎಂದರು.

ಜನ ಸೇವಾ ಸಮಿತಿ ಸಂಸ್ಥೆಯ ಕಾರ್ಯದರ್ಶಿ, ವಕೀಲರು ಹಾಗೂ ನೋಟರಿ ಆಗಿರುವ ವಿ.ಬಿ. ಹುಬ್ಬಳ್ಳಿ ಮಾತನಾಡಿ, ಪ್ಯಾರಾ ಮೆಡಿಕಲ್ ಕೋರ್ಸ್ ಬಗ್ಗೆ ಯಾರೂ ಅಲಕ್ಷ್ಯ ಮಾಡಬಾರದು. ಈ ಕ್ಷೇತ್ರದ ಸೇವೆಗೆ ಬೆಲೆ ಕಟ್ಟಲಾಗದ್ದು. ಪ್ಯಾರಾ ಮೆಡಿಕಲ್ ಓದಿದ ಯಾರೊಬ್ಬರೂ ನಿರುದ್ಯೋಗ ಸಮಸ್ಯೆ ಎದುರಿಸುತ್ತಿಲ್ಲ. ಸಂಕೋಚ ಪಡದೇ ಮನಸ್ಸಿಟ್ಟು ಓದಿ, ಭವಿಷ್ಯವನ್ನು ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರಲ್ಲದೆ, ಬಡವರಾಗಿ ಹುಟ್ಟುವುದು ತಪ್ಪಲ್ಲ. ಆದರೆ, ಅದನ್ನು ಮೆಟ್ಟಿನಿಂತು ಬಡವನಾಗಿ ಸಾಯಬಾರದು. ಆ ಅವಕಾಶ ನಮ್ಮ ಕೈಯಲ್ಲೇ ಇರುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ವಿನಯ ಹುಬ್ಬಳ್ಳಿ ಮಾತನಾಡಿ, ನಾವು ವೈದ್ಯಕೀಯ ಕ್ಷೇತ್ರಕ್ಕೆ ಪೂರಕವಾಗಿ ಪ್ಯಾರಾ ಮೆಡಿಕಲ್ ಕೋರ್ಸ್‌ಗಳನ್ನು ನಡೆಸುತ್ತಿದ್ದೇವೆ. ಸ್ವಸ್ಥ ಸಮಾಜಕ್ಕೆ ಇದು ಕೂಡ ಒಂದು ರೀತಿಯ ಸೇವೆ. ನಮಗೆ ಪ್ರತಿಯೊಬ್ಬ ವಿದ್ಯಾರ್ಥಿ, ಅವರ ಪಾಲಕರು, ಸಮಾಜ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಮಂಜುನಾಥ ಬಸಪ್ಪ ಅಬ್ಬಿಗೇರಿ ಹಾಗೂ ಡಾ. ರಾಜು ಜಿ.ಎಂ. ಅವರನ್ನು ಶ್ರೀ ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜಿನ ಪರವಾಗಿ ಸನ್ಮಾನಿಸಿ, ಗೌರವಿಸಲಾಯಿತು. ಜನ ಸೇವಾ ಸಮಿತಿಯ ಶ್ರೀ ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ 2023-24ನೇ ಸಾಲಿಗೆ ಪ್ರವೇಶ ಪಡೆದ ಮೊದಲ ವರ್ಷದ ವಿದ್ಯಾರ್ಥಿಗಳು ಕೇಕ್ ಕತ್ತರಿಸಿ, ಸಂಭ್ರಮಿಸಿದರು.

ಶ್ರೀ ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜಿನ ವ್ಯವಸ್ಥಾಪಕ ನಿರ್ದೇಶಕಿ ಅನಘಾ ವಿನಯ ಹುಬ್ಬಳ್ಳಿ, ಕಾಲೇಜಿನ ಪ್ರಾಚಾರ್ಯ ಆರ್.ವಿ. ಜವಳಿ ವೇದಿಕೆಯಲ್ಲಿದ್ದರು. ಪಿಯು ಕಾಲೇಜಿನ ಪ್ರಾಚಾರ್ಯ ಎಚ್.ಎಫ್. ಪೂಜಾರ ಸ್ವಾಗತಿಸಿ, ಅತಿಥಿಗಳನ್ನು ಪರಿಚಯಿಸಿದರು. ಶ್ರೀಗೌರಿ ತಂಡದವರು ಪ್ರಾರ್ಥಿಸಿದರು. ಶ್ರೀದೇವಿ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ರೂಪಾ ವಂದಿಸಿದರು.

### ಬಿ.ಎಚ್. ಪಾಟೀಲ ಸಂಯುಕ್ತ ಪ.ಪೂ ಕಾಲೇಜಿನಲ್ಲಿ ಬೀಳ್ಕೊಡುಗೆ, ವಾರ್ಷಿಕ ಸ್ನೇಹ ಸಮ್ಮೇಳನ

# ಗುರಿ ತಲುಪಲು ಪೂರ್ವಸಿದ್ಧತೆ ಅಗತ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಭವಿಷ್ಯದ ಜೀವನ ಯಶಸ್ವಿಯಾಗಲು ವಿದ್ಯಾರ್ಥಿ ಜೀವನದಲ್ಲಿಯೇ ಭದ್ರವಾದ ಬುನಾದಿಯನ್ನು ನಿರ್ಮಿಸಿಕೊಂಡು ಗುರಿಯನ್ನು ತಲುಪಬೇಕು ಎಂದು ಗದಗ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ಅಮಿತ ಬಿದರಿ ಸಲಹೆ ನೀಡಿದರು.

ಇಲ್ಲಿಯ ಬಿ.ಎಚ್. ಪಾಟೀಲ ಸಂಯುಕ್ತ ಪದವಿಪೂರ್ವ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುವ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯಾವುದೇ ಗುರಿ ತಲುಪಲು ಪೂರ್ವ ಸಿದ್ಧತೆ ಮಾಡಿಕೊಳ್ಳುವುದು ಮುಖ್ಯವಾಗಿರುತ್ತದೆ. ಈಗ ಎಷ್ಟು ಶ್ರಮ ಪಡುತ್ತೀರೋ ಅಷ್ಟೇ ಮುಂದೆ ತಮ್ಮ ಗುರಿ ಮುಟ್ಟುವುದಕ್ಕೆ ಸಾಧ್ಯವಾಗುತ್ತದೆ. ಐಎಎಸ್, ಕೆಎಎಸ್, ಐಪಿಎಸ್‌ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ನಿತಂರತರ ಅಭ್ಯಾಸ ಜೊತೆಗೆ ಸಂಕಲ್ಪ ಅವಶ್ಯ ಎಂದರು.


ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಮಾತನಾಡಿ, ಇಂದು ಶಿಕ್ಷಕರು ಮತ್ತು ವಿದ್ಯಾರ್ಥಿಗಳ ನಡುವೆ ವಿಶ್ವಾಸಾರ್ಹತೆ ಕಡಿಮೆಯಾಗಿದ್ದು, ವಿದ್ಯಾರ್ಥಿಗಳ ಮೇಲೆ ನಂಬಿಕೆ ಇಲ್ಲದಂತಾಗಿದೆ. ನಮ್ಮ ಕಾಲದಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ನಡುವೆ ಅನ್ಯೋನ್ಯ ಸಂಬಂಧವಿತ್ತು. ವಿದ್ಯಾರ್ಥಿಗಳು ಶ್ರದ್ಧೆ, ಸಂಸ್ಕೃತಿ, ಸಂಪ್ರದಾಯಗಳನ್ನು ಅಳವಡಿಸಿಕೊಂಡು ಯಶಸ್ವಿಯಾಗಬೇಕು. ಸಾಧನೆ ಮಾಡಲು ಶಿಕ್ಷಕರ, ಹಿರಿಯರ ಮಾರ್ಗದರ್ಶನ ಅವಶ್ಯವಿದೆ ಎಂದರು.

ಕಳೆದ ಸಾಲಿನ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸಹೋದರ ಚನ್ನವೀರಗೌಡ ಪಾಟೀಲ ಅವರ ಸ್ಮರಣಾರ್ಥವಾಗಿ ಜಿ.ಪಂ ಮಾಜಿ ಅಧ್ಯಕ್ಷ ಸಿದ್ಲೇಲಿಂಗೇಶ್ವರ ಪಾಟೀಲ ನಗದು ಬಹುಮಾನ ನೀಡಿದರು. ಇದೇ ವಿದ್ಯಾರ್ಥಿಗಳಿಗೆ ಸಂಸ್ಥೆಯ ನಿರ್ದೇಶಕ ವೀರಯ್ಯ ಗಂಧದ ನಗದು ಬಹುಮಾನ ವಿತರಿಸಿದರು. ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಿದ ಮತ್ತು ಆದರ್ಶ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ನಿವೃತ್ತ ಉಪನ್ಯಾಸಕ ಎ.ಆರ್. ಜೋಶಿ, ನಿವೃತ್ತ ಶಿಕ್ಷಕ ಎಸ್.ಎಸ್. ದೊಡ್ಡಮನಿ ಅವರು ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ಈಶ್ವರಪ್ಪ ಕುಂಬಾರ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ನಿರ್ದೇಶಕರಾದ ಮಲ್ಲಪ್ಪ ಕಮತರ, ವೀರಯ್ಯ ಗಂಧದ, ಟಿ.ಎನ್. ಅಂಬಕ್ಕಿ, ಕೆ.ಎಂ. ಪಾಟೀಲ, ಹಿರಿಯ ಶಿಕ್ಷಕ ಎ.ಎನ್. ಪೂಜಾರ ವೇದಿಕೆಯಲ್ಲಿದ್ದರು. ಪ್ರಾಚಾರ್ಯ ಬಿ.ವಿ. ಪಾಟೀಲ ಸ್ವಾಗತಿಸಿದರು. ಆರ್.ಎಸ್. ಚವಡಿ ನಿರೂಪಿಸಿದರು. ಜೆ.ಜಿ. ಮಕನದಾರ ವಂದಿಸಿದರು.

## ಮಹಾಂತ ಶಿವಯೋಗಿಗಳು ಆದರ್ಶಪ್ರಾಯರು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಜಾತ್ರೆಗಳು ನಮ್ಮಲ್ಲಿರುವ ಅಜ್ಞಾನವನ್ನು ಅಡಗಿಸಿ ಸುಜ್ಞಾನ ನೀಡುತ್ತವೆ ಎಂದು ಧಾರವಾಡ ಸಿಎಸ್‌ಐ ಕಾಲೇಜಿನ ಉಪನ್ಯಾಸಕ ಡಾ.ಶಂಭುಲಿಂಗ ಹೆಗಡಾಳ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 165ನೇ ಜಾತ್ರಾ ಮಹೋತ್ಸವದ ಅನುಭಾವ ಗೋಷ್ಠಿ-3 ಕಾರ್ಯಕ್ರಮದಲ್ಲಿ ಮಾತನಾಡಿ, ಬಾಲಲೀಲಾ ಮಾಹಾಂತ ಶಿವಯೋಗಿಗಳು ತಮ್ಮ ಜೀವನವನ್ನು ಸಮಾಜದ ಉದ್ಧಾರಕ್ಕಾಗಿ ತ್ಯಾಗಿ ಜೀವಿಯಾಗಿ, ಕಾಯಕ ಯೋಗಿಗಳಾಗಿ ನಾಡಿನ ಜನತೆಗೆ ಆದರ್ಶಪ್ರಾಯರಾಗಿ ಬದುಕಿದವರು. ಅವರ ವಚನ ಸಾಹಿತ್ಯಗಳು ಇಂದಿಗೂ ಪ್ರಸ್ತುತವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ತಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಸುಂದರವಾಗಿ ರೂಪುಗೊಳುತ್ತದೆ ಎಂದರು.

ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾ ಸ್ವಾಮಿಜಿ ಮಾತನಾಡಿ, ಬಾಲಲೀಲಾ ಮಾಹಾಂತ ಶಿವಯೋಗಿಗಳು ಕೈವಲ್ಯ ದರ್ಪಣ ಹರಿಕಾರರು. ಶಿವಯೋಗಿಗಳು ತಮ್ಮ ಬದುಕಿನುದ್ದಕ್ಕೂ ಸಮಾಜದ ಒಳಿತಿಗಾಗಿ ಬದುಕಿದವರು. ಯಾವ ಆಸೆ, ಆಮಿಷಗಳಿಗೆ ಒಳಗಾಗದೆ ಸಾರ್ಥಕ ಜೀವನ ಸಾಗಿಸಿದವರು ಎಂದರು.

ಕಲಬುರ್ಗಿಯ ಸಂಗಮೇಶ ಪಾಟೀಲ್‌ರಿಂದ ವಚನ ಸಂಗೀತ, ಕೊಪ್ಪಳದ ಅಪ್ಪಾಜಿ ಮೇಲೋಡಿಸ್ ಮೈಲಾರಿ ಕುಡಗುಂಟಿ ಅವರಿಂದ ರಸಮಂಜರಿ ಜರುಗಿತು.

ಸಮ್ಮುಖವನ್ನು ಸವಣೂರ ದೊಡ್ಡ ಹುಣಸೆಕಲ್ಮಠದ ಚನ್ನಬಸವ ಮಾಹಾಸ್ವಾಮೀಜಿ, ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಗದಗ ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ, ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ್, ಜಾತ್ರಾ ಸಮಿತಿ ಅಧ್ಯಕ್ಷ ಬಸವರಾಜ ಬಾತಾಖಾನಿ, ಮಂಜುನಾಥ ಮಟ್ಟಿ, ಎಸ್.ಎಂ. ಉಜ್ಜಣ್ಣವರ ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka